₹ 6 @vishwavaninews epaper.vishwavani.news vishwavani.news ಬೆಂಗಳೂರು | ಹುಬ್ಬಳ್ಳಿ | ಮಂಗಳೂರು | ದಾವಣಗೆರೆ | ಕಲಬುರಗಿ | ಬೆಳಗಾವಿ ಮಂಗಳವಾರ 06.05.2025 ಸಂಪುಟ: 10 ಸಂಚಿಕೆ: 112 ಪುಟಗಳು: 12 ಪ್ರಧಾನ ಸಂಪಾದಕ: ವಿಶ್ವೇಶ್ವರ ಭಟ್

ವಿಶ್ವವಾಣಿ
ವಿಶ್ವಾಸವೇ ವಿಶ್ವ

ಕಮಿನ್ಸ್ ಕೈಚಳಕ ದಿಂಡುರುಳಿದ ಡೆಲ್ಲಿ

ಸನ್‌ರೈಸರ್ಸ್ ಹೈದರಾಬಾದ್ ತಂಡದ ನಾಯಕ ಪ್ಯಾಟ್ ಕಮಿನ್ಸ್ ತಮ್ಮ 3 ಓವರ್‌ಗಳ ಮೊದಲ ಎಸೆತದಲ್ಲಿ ವಿಕೆಟ್ ಪಡೆಯುವ ಮೂಲಕ ಐಪಿಎಲ್‌ನಲ್ಲಿ ಹೊಸ ದಾಖಲೆ ಮಾಡಿದ್ದಾರೆ. ಕಮಿನ್ಸ್ ದಾಳಿಗೆ ಕುಸಿದ ಡೆಲ್ಲಿ ತಂಡವು ನಿಗದಿತ 20 ಓವರ್‌ನಲ್ಲಿ ಕೇವಲ 133 ರನ್ ಗಳಿಸಲಷ್ಟೇ ಶಕ್ತವಾಯಿತು. ಮಳೆಯ ಕಾರಣ ಪಂದ್ಯ ರದ್ದಾದ ಹಿನ್ನೆಲೆಯಲ್ಲಿ ಎರಡೂ ತಂಡಗಳಿಗೆ ತಲಾ ಒಂದು ಅಂಕ ನೀಡಲಾಗಿದೆ.

ಪಾಕ್ ಮೇಲೆ ದಾಳಿಗೆ ಭಾರತ ಸನ್ನದ್ಧ

ನಾಳೆ ದೇಶಾದ್ಯಂತ ಅಣಕು ತಾಲೀಮು

ಯುದ್ಧ ಸನ್ನಿಹಿತ

ದೆಹಲಿ: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಮತ್ತು ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ಮತ್ತಷ್ಟು ದಟ್ಟವಾಗಿದೆ. ಈ ನಡುವೆಯೇ ಮೇ 7ರಂದು ಮಾಕ್ ಡ್ರಿಲ್ ನಡೆಸುವಂತೆ ನಡೆಸುವಂತೆ ಕೇಂದ್ರ ಗೃಹ ಸಚಿವಾಲಯವು ಹಲವು ರಾಜ್ಯಗಳಿಗೆ ಸೂಚಿಸಿದೆ.

ವಾಯುದಾಳಿಯ ಸೈರನ್ ವ್ಯವಸ್ಥೆ ಇರುವಂತೆ ನೋಡಿಕೊಳ್ಳಿ ಮತ್ತು ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಪರಿಣಾಮಕಾರಿ ರಕ್ಷಣಾ ಅಂಶಗಳ ಕುರಿತು ತರಬೇತಿ ನೀಡಬೇಕು. ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ಸಿದ್ಧತೆಯನ್ನು ಪರೀಕ್ಷಿಸಲು ಮತ್ತು ಸಾರ್ವಜನಿಕ ಜಾಗೃತಿಯನ್ನು ಹೆಚ್ಚಿಸಲು ಮೇ 7ರಂದು ಸಮಗ್ರ ನಾಗರಿಕ ರಕ್ಷಣಾ ಅಣಕು ಕವಾಯತುಗಳನ್ನು ನಡೆಸಬೇಕು. ಕ್ರ್ಯಾಶ್ ಬ್ಲ್ಯಾಕೌಟ್ ಕ್ರಮಗಳನ್ನು ಒದಗಿಸಬೇಕು, ಪ್ರಮುಖ ಸ್ಥಾವರಗಳು ಮತ್ತು ಪ್ರಮುಖ ಕಟ್ಟಡಗಳನ್ನು ಮರೆಮಾಚುವಿಕೆ ಮತ್ತು ನಾಗರಿಕರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರ ನಡೆಸುವ ಬಗ್ಗೆ ಪೂರ್ವಾಭ್ಯಾಸ ಮಾಡಬೇಕು ಎಂದು ಸೂಚಿಸಲಾಗಿದೆ.

ರಕ್ಷಣಾ ಕಾರ್ಯದರ್ಶಿ ಜತೆ ಪ್ರಧಾನಿ ಚರ್ಚೆ: ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರು ಸೋಮವಾರ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದ್ದಾರೆ.

ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಬಳಿಕ ಭಾರತ ಹಾಗೂ ಪಾಕಿಸ್ತಾನ ನಡುವೆ ಉದ್ವಿಗ್ನ ಸ್ಥಿತಿ ನಿರ್ಮಾಣವಾಗಿದ್ದು, ದಾಳಿಯಲ್ಲಿ ಭಾಗಿಯಾ ದವರನ್ನು ಕಠಿಣ ಶಿಕ್ಷೆಗೆ ಗುರಿಪಡಿಸುವುದಾಗಿ ಕೇಂದ್ರ ಸರಕಾರ ಹೇಳಿದೆ. → 4

ಭಾರತಕ್ಕೆ ರಷ್ಯಾ, ಜಪಾನ್ ಬೆಂಬಲ

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಸೋಮವಾರ ದೂರವಾಣಿ ಕರೆ ಮಾಡಿ, ಭಯೋತ್ಪಾದನೆ ವಿರುದ್ಧದ ಭಾರತದ ಹೋರಾಟಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ. ಜತೆಗೆ, ಪಹಲ್ಗಾಮ್ ಉಗ್ರ ದಾಳಿಕೋರರಿಗೆ ಮಣ್ಣುಮುಕ್ಕಿಸಿ ಎಂದು ಹೇಳಿದ್ದಾರೆ. ಭಾರತದ ಪ್ರವಾಸದಲ್ಲಿರುವ ಜಪಾನ್‌ನ ರಕ್ಷಣಾ ಸಚಿವ ಜನರಲ್ ನಕಾಟಾನಿ ಅವರನ್ನು ಭೇಟಿಯಾಗಿರುವ ರಕ್ಷಣಾ ಸಚಿವ ರಾಜನಾಥ ಸಿಂಗ್, ಭಯೋತ್ಪಾದನೆ, ಇಂಡೋ-ಫೆಸಿಫಿಕ್‌ನಲ್ಲಿ ಚೀನಾ ಮಿಲಿಟರಿ ನಿಲುವು ಸೇರಿದಂತೆ ದ್ವಿಪಕ್ಷೀಯ ರಕ್ಷಣಾ ಬಾಂಧವ್ಯ ವಿಸ್ತರಿಸುವ ಸಂಬಂಧ ಮಾತುಕತೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯನ್ನು ಜಪಾನ್‌ನ ರಕ್ಷಣಾ ಸಚಿವರು ಖಂಡಿಸಿದ್ದು, ಭಾರತಕ್ಕೆ ಸಂಪೂರ್ಣ ಬೆಂಬಲ ಘೋಷಿಸಿದ್ದಾರೆ.

ಉಗ್ರರ ಅಡಗುತಾಣ ಪತ್ತೆ

ಜಮ್ಮು ಮತ್ತು ಕಾಶ್ಮೀರದ ಪೂಂಚ್ ಜಿಲ್ಲೆಯ ಅರಣ್ಯದಲ್ಲಿ ಉಗ್ರರ ಅಡಗುತಾಣವನ್ನು ಪತ್ತೆ ಮಾಡಿರುವ ಭದ್ರತಾ ಪಡೆಗಳು ಐದು ಕಚ್ಚಾಬಾಂಬ್‌ಗಳು ಮತ್ತು ಎರಡು ವೈರ್‌ಲೆಸ್‌ಗಳನ್ನು ವಶಕ್ಕೆ ಪಡೆದಿವೆ. ಬಳಕೆಗೆ ಸಜ್ಜುಗೊಳಿಸಿ ಇಟ್ಟಿದ್ದ ಅರ್ಧ ಕೆ.ಜಿಯಿಂದ ಐದು ಕೆ.ಜಿ ತೂಗುತ್ತಿದ್ದ ಕಚ್ಚಾ ಬಾಂಬ್‌ಗಳನ್ನು ಸ್ಥಳದಲ್ಲೇ ನಿಷ್ಕ್ರಿಯಗೊಳಿಸಲಾಗಿದೆ. ಸುರಾನ್ ಕೋಟ್ ಸಮೀಪದ ಸುರಂತಾಲ್‌ನಲ್ಲಿ ಜಂಟಿ ಕಾರ್ಯಾಚರಣೆಯಲ್ಲಿ ಬಕೆಟ್ ಮತ್ತು ಟಿಫನ್ ಬಾಕ್ಸ್‌ನಲ್ಲಿ 5 ಸ್ಫೋಟಕಗಳು, ಗ್ಯಾಸ್ ಸಿಲಿಂಡರ್, ಬೈನಾಕ್ಯುಲರ್ ಮತ್ತಿತರ ವಸ್ತುಗಳು ಪತ್ತೆಯಾಗಿವೆ.

ಪಾಕಿಸ್ತಾನಕ್ಕೆ ಚೀನಾ ಬಲ

ಪಾಕಿಸ್ತಾನದಲ್ಲಿರುವ ಚೀನಾ ರಾಯಭಾರಿ ಜಿಯಾಂಗ್ ಜೈಡಾಂಗ್ ಪಾಕಿಸ್ತಾನ ಅಧ್ಯಕ್ಷ ಆಸಿಫ್ ಅಲಿ ಜರ್ದಾರಿ ಅವರನ್ನು ಭೇಟಿ ಮಾಡಿ ಭಾರತದೊಂದಿಗೆ ನಡೆಯುತ್ತಿರುವ ಪರಿಸ್ಥಿತಿಯ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿದ್ದು, 'ಯಾವುದೇ ಕ್ಷಣದಲ್ಲೂ ನಿಮ್ಮನ್ನು ಬಿಟ್ಟು ಕೊಡುವುದಿಲ್ಲ' ಎಂದು ಪಾಕಿಸ್ತಾನಕ್ಕೆ ಚೀನಾ ಅ ಭಯ ನೀಡಿದೆ.

ಪಾಕ್: ಮತ್ತೆ ಕ್ಷಿಪಣಿ ಪರೀಕ್ಷೆ

ಭಾರತದ ಜತೆ ಉದ್ವಿಗ್ನ ಪರಿಸ್ಥಿತಿ ಇರುವಾಗಲೇ ಪಾಕಿಸ್ತಾನವು 120 ಕಿ.ಮೀ. ದೂರ ಕ್ರಮಿಸುವ ಸಾಮರ್ಥ್ಯ ಇರುವ 'ಫತೇಹ್' ಸರಣಿಯ ನೆಲ ಕ್ಷಿಪಣಿಯ ತರಬೇತಿ ಉಡಾವಣೆಯನ್ನು ಸೋಮವಾರ ಯಶಸ್ವಿಯಾಗಿ ನೆರವೇರಿಸಿದೆ. 26 ಮಂದಿ ಸಾವಿಗೆ ಕಾರಣವಾದ ಪಹಲ್ಗಾಮ್ ದಾಳಿಯ ಬಳಿಕ ಉಭಯ ರಾಷ್ಟ್ರಗಳು ಸಮರಾಭ್ಯಾಸ ನಡೆಸುತ್ತಿವೆ.

ಉಗ್ರರಿಗೆ ಆಸರೆ ಕಾಶ್ಮೀರಿ ಖತಂ

ಉಗ್ರರಿಗೆ ಊಟ-ಆಶ್ರಯ ನೀಡಿ ನೆರವು ನೀಡಿದ್ದ ಇಮ್ತಿಯಾಜ್ ಅಹ್ಮದ್ ಮಾಗ್ರೆ (23) ಎಂಬಾತ ಭದ್ರತಾ ಪಡೆಗಳಿಂದ ತಪ್ಪಿಸಿಕೊಳ್ಳಲು ಹೋಗಿ, ನದಿಗೆ ಹಾರಿ ಮುಳುಗಿ ಸಾವನ್ನಪ್ಪಿದ್ದಾನೆ. ಇಮ್ತಿಯಾಜ್‌ನನ್ನು ಭಯೋತ್ಪಾದಕರು ಅಡಗಿದ್ದ ಸ್ಥಳಕ್ಕೆ ಕೊಂಡೊಯ್ಯುತ್ತಿದ್ದಾಗ, ತಪ್ಪಿಸಿಕೊಳ್ಳಲು ಯತ್ನಿಸಿ, ನದಿಗೆ ಹಾರಿದ್ದಾನೆ. ಈಜಲಾಗದೆ ಮೃತಪಟ್ಟಿದ್ದಾನೆ.

ನಾಗಮೋಹನ್ ದಾಸ್ ನೇತೃತ್ವದ ಆಯೋಗದಿಂದ ಸಮೀಕ್ಷೆ ಆರಂಭ

ಒಳಮೀಸಲು ಸಮೀಕ್ಷೆಗೆ 100 ಕೋಟಿ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಭಾರಿ ವಿವಾದ ಸೃಷ್ಟಿಸಿದ್ದ, ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನ ಪ್ರಮುಖ ಘೋಷಣೆಗಳಲ್ಲಿ ಒಂದಾಗಿದ್ದ ಒಳಮೀಸಲು ಜಾರಿಗೆ ಸಂಬಂಧಿಸಿದ ಸಮೀಕ್ಷೆಗೆ ಸೋಮವಾರದಿಂದ ಅಧಿಕೃತ ಚಾಲನೆ ಸಿಕ್ಕಿದ್ದು, ಮುಂದಿನ 18 ದಿನ ವಿವಿಧ ಹಂತಗಳಲ್ಲಿ ಪರಿಶಿಷ್ಟ ಜಾತಿಯಲ್ಲಿರುವ ಒಳ ಮೀಸಲಿಗೆ ಸಂಬಂಧಿಸಿದಂತೆ ಸಮೀಕ್ಷೆ ನಡೆಯಲಿದೆ.

ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ನೇತೃತ್ವದ ಆಯೋಗ ಒಳ ಮೀಸಲಿಗೆ ಸಂಬಂಧಿಸಿದ ಸಮೀಕ್ಷೆಯನ್ನು 58 ಸಾವಿರ ಶಿಕ್ಷಕರ ಸಹಾಯದೊಂದಿಗೆ ಆರಂಭಿಸಿದ್ದು, ಇದೀಗ ಈ ಸಮೀಕ್ಷೆಗೆ ಬರೋಬ್ಬರಿ ನೂರು ಕೋಟಿ ರು. ಅಗತ್ಯವಿದೆ ಎಂದು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಹೇಳಿದ್ದಾರೆ. ಪರಿಶಿಷ್ಟ ಜಾತಿ ಪಟ್ಟಿಯಲ್ಲಿ ಒಟ್ಟು 101 ಜಾತಿಗಳಿವೆ. ಈ ಪೈಕಿ ಆದಿ ಕರ್ನಾಟಕ, ಆದಿ ದ್ರಾವಿಡ ಮತ್ತು ಆದಿ ಆಂಧ್ರ ಉಪ ಜಾತಿಗಳು ಯಾವ ಜಾತಿಗೆ ಸೇರಿವೆ ಎಂಬ ಗೊಂದಲವನ್ನೂ ಇತ್ಯರ್ಥಪಡಿಸಬೇಕಾಗಿದೆ. ದಾಖಲೆ, ಪುರಾವೆ, ಅಂತರ್ ಹಿಂದುಳಿದಿರುವಿಕೆ ಇನ್ನಿತರ ಮಾಹಿತಿ ಸಂಗ್ರಹಿಸಿ ವೈಜ್ಞಾನಿಕ ಮತ್ತು ತರ್ಕಬದ್ಧವಾಗಿ ಎಸ್‌ಸಿ ಮೀಸಲು ವರ್ಗೀಕರಣ ನಡೆಸುವ ಜವಾಬ್ದಾರಿಯಿದೆ.

ಹಂತ 1	ಮೇ 5ರಿಂದ 17	ಮನೆ ಮನೆಗೆ ಹೋಗಿ ದತ್ತಾಂಶ ಸಂಗ್ರಹ
ಹಂತ 2	ಮೇ 19ರಿಂದ 21	ವಿಶೇಷ ಶಿಬಿರಗಳ ಮೂಲಕ ಮಾಹಿತಿ ಸಂಗ್ರಹ
ಹಂತ 3	ಮೇ 19ರಿಂದ 23	ಆನ್‌ಲೈನ್ ಮೂಲಕ ಸ್ವಯಂ ಘೋಷಣೆಗೆ ಅವಕಾಶ

ಹೇಗಿರಲಿದೆ ಸಮೀಕ್ಷಾ ಕಾರ್ಯ?

ಸಮೀಕ್ಷೆ ವೇಳೆ ಕುಟುಂಬದ ಯಾರಾದರೂ ಒಬ್ಬರು ಗಣತಿದಾರರಿಗೆ ಆಧಾರ್ ಕಾರ್ಡ್ ಅಥವಾ ಕುಟುಂಬದ ಪಡಿತರ ಚೀಟಿಯನ್ನು ತೋರಿಸಬೇಕು. ಅಂತರಜಾತಿ ವಿವಾಹವಾದ ಪ್ರಕರಣಗಳಲ್ಲಿ ಹೆಂಡತಿ ಅಥವಾ ಸೊಸೆಗೆ ಜಾತಿ ಬೇರೆಯಿದ್ದರೆ, → 4

ನಾವು ನಮ್ಮ ಚುನಾವಣಾ ಪ್ರಣಾಳಿಕೆಯಲ್ಲೂ ವರದಿ ಜಾರಿ ಬಗ್ಗೆ ಘೋಷಣೆ ಮಾಡಿದ್ದೆವು. ಒಳಮೀಸಲಾತಿ ಪರವಾಗಿ ಸುಪ್ರೀಂ ಕೋರ್ಟ್ ಕೂಡ ಹೇಳಿದೆ. ಸಮುದಾಯದ ಸಂಘಟನೆಗಳು, ಮುಖಂಡರಿಗೂ ನಾವು ಒಳಮೀಸಲಾತಿ ಬಗ್ಗೆ ಭರವಸೆ ನೀಡಿದ್ದೆವು. ಆದ್ದರಿಂದ ದತ್ತಾಂಶ ಸಂಗ್ರಹ ಸಮೀಕ್ಷೆಯಲ್ಲಿ ಪೂರ್ಣವಾಗಿ ತೊಡಗಿಸಿಕೊಂಡು ಮಾಹಿತಿ ಕೊಡಿ. ಎಲ್ಲ ಸಂಘಟನೆಗಳೂ ಇದಕ್ಕೆ ಸಹಕರಿಸಿ.

– ಸಿದ್ದರಾಮಯ್ಯ, ಮುಖ್ಯಮಂತ್ರಿ

ಮಾಜಿ ಮುಖ್ಯಮಂತ್ರಿ ಕೆ.ಸಿ.ರೆಡ್ಡಿ ಅವರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆ ಬಳಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದರು.

ಸೀಲ್ ಇಲ್ಲದ ಪ್ರಶ್ನೆಪತ್ರಿಕೆ ಬಂಡಲ್, ಪರೀಕ್ಷಾರ್ಥಿಗಳ ಆರೋಪ, ಆಯೋಗಕ್ಕೆ ದೂರು

ಕೆಎಎಸ್ ಪ್ರಶ್ನೆಪತ್ರಿಕೆ ಮತ್ತೆ ಸೋರಿಕೆ?

ಬೆಂಗಳೂರು: ಸದಾ ಒಂದಿಲ್ಲೊಂದು ವಿವಾದಗಳಿಂದಲೇ ಸುದ್ದಿಯಾಗುವ ಕೆಪಿಎಸ್‌ಸಿ, ಹಲವು ಗೊಂದಲಗಳ ನಡುವೆ ನಡೆಸಿದ ಕೆಎಎಸ್ ಮುಖ್ಯಪರೀಕ್ಷೆಯ ಪ್ರಶ್ನೆ ಪತ್ರಿಕೆಯೂ ಎರಡು ದಿನಗಳ ಮೊದಲೇ ಸೋರಿಕೆಯಾಗಿದೆ ಎನ್ನುವ ಗಂಭೀರ ಆರೋಪ ಕೇಳಿಬಂದಿದೆ.

ಮೈಸೂರು ರಸ್ತೆಯ ಬಿಬಿಎಂಪಿ ಪಿಯು ಕಾಲೇಜುನಲ್ಲಿ ನಡೆದ ಈ ಘಟನೆಯಿಂದ ಪರೀಕ್ಷಾ ನಿಯಮಾವಳಿಗಳ ಉಲ್ಲಂಘನೆಯಾಗಿದೆ. ಕೆಎಎಸ್ ಮುಖ್ಯ ಪರೀಕ್ಷೆಯ ಎರಡನೇ ದಿನದ ಪ್ರಬಂಧ ಮಾದರಿ ಪರೀಕ್ಷೆಯ ಸಂದರ್ಭದಲ್ಲಿ, ಪ್ರಶ್ನೆ ಪತ್ರಿಕೆ ಬಂಡಲ್‌ನ ಸೀಲ್ ಮೊದಲೇ ತೆರೆದ ಸ್ಥಿತಿಯಲ್ಲಿ ಕಂಡುಬಂದಿದೆ. → 4

ಪ್ರತಿಕ್ರಿಯೆ ನೀಡದ ಕೆಪಿಎಸ್‌ಸಿ

ಅಭ್ಯರ್ಥಿಗಳು ಘಟನೆಯ ಬಗ್ಗೆ ಬಿಬಿಎಂಪಿ ಪಿಯು ಕಾಲೇಜಿನ ಪ್ರಾಂಶುಪಾಲರಿಗೆ ಪ್ರಾಥಮಿಕ ದೂರು ಸಲ್ಲಿಸಿದ್ದಾರೆ. ಜತೆಗೆ, ಕೆಪಿಎಸ್‌ಸಿಗೆ ಪತ್ರ ಬರೆದು, ಈ ವಿಷಯದ ತನಿಖೆಗೆ ಒತ್ತಾಯಿಸಿದ್ದಾರೆ. ಕೆಪಿಎಸ್‌ಸಿ ಈ ಆರೋಪಗಳ ಕುರಿತು ಯಾವುದೇ ಅಧಿಕೃತ ಪ್ರತಿಕ್ರಿಯೆ ನೀಡಿಲ್ಲ. ಅಭ್ಯರ್ಥಿಗಳ ಒತ್ತಾಯದ ಮೇರೆಗೆ ತನಿಖೆ ನಡೆಯುವ ಸಾಧ್ಯತೆಯಿದೆ. ಪರೀಕ್ಷೆಯ ವಿಶ್ವಾಸಾರ್ಹತೆ ಕಾಪಾಡಲು ಕೆಪಿಎಸ್‌ಸಿ ಕ್ರಮಕೈಗೊಳ್ಳಬೇಕು ಎಂದು ಅಭ್ಯರ್ಥಿಗಳು ಆಗ್ರಹಿಸಿದ್ದಾರೆ.

ವಕ್ಫ್ ವಿಚಾರಣೆ ಮುಂದೂಡಿಕೆ

ದೆಹಲಿ: ವಿವಾದಾತ್ಮಕ ವಕ್ಫ್(ತಿದ್ದುಪಡಿ) ಕಾಯ್ದೆಯ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಅರ್ಜಿಗಳ ಬ್ಯಾಚ್ ಅನ್ನು ಮೇ 15ರಂದು ಭಾರತದ ನಿಯೋಜಿತ ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ಅವರು ವಿಚಾರಣೆ ನಡೆಸಲಿದ್ದಾರೆ ಎಂದು ಸುಪ್ರೀಂಕೋರ್ಟ್ ಸೋಮವಾರ ಹೇಳಿದೆ.

ಮೇ 13ರಂದು ನಿವೃತ್ತರಾಗಲಿರುವ ಹಾಲಿ ಸಿಜೆಐ ಸಂಜೀವ್ ಖನ್ನಾ ಅವರು, ಕಾನೂನಿನ ಕೆಲವು ಅಂಶಗಳಿಗೆ ಸ್ಪಷ್ಟೀಕರಣದ ಅಗತ್ಯವಿರುವುದರಿಂದ ಈ ವಿಷಯದ ಕುರಿತು ತೀರ್ಪು ಅಥವಾ ಮಧ್ಯಂತರ ಆದೇಶವನ್ನು ಕಾಯ್ದಿರಿಸಲು ಬಯಸುವುದಿಲ್ಲ ಎಂದು ತಿಳಿಸಿದರು. ಮೇ 15ರಿಂದ ಗವಾಯಿ ನೇತೃತ್ವದ ಪೀಠ ವಿಚಾರಣೆ ಮುಂದುವರಿಸಲಿದೆ.

ಸುಹಾಸ್ ಶೆಟ್ಟಿ ಹತ್ಯೆಗೆ ವಿದೇಶದಿಂದ ಹಫ್ತಾ?

ಬೆಂಗಳೂರು: ರಾಜ್ಯ ರಾಜಕೀಯದಲ್ಲಿ ತೀವ್ರ ವಾಕ್ಸಮರಕ್ಕೆ ಕಾರಣವಾಗಿರುವ ಸುಹಾಸ್ ಶೆಟ್ಟಿ ಹತ್ಯೆಗೆ ವಿದೇಶದಿಂದ ಬಂದ ಹಣದ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಕೊಲೆ ಪ್ರಕರಣದಲ್ಲಿ ಈಗಾಗಲೇ ಬಂಧಿತರಾಗಿರುವ 8 ಆರೋಪಿಗಳ ವಿವಿಧ ಬ್ಯಾಂಕ್ ಖಾತೆಗಳ ಪರಿಶೀಲನೆ ನಡೆದಿದೆ. ಕೊಲೆಯಾಗಿರುವ ಫಾಝಿಲ್ ಸಹೋದರ ಆದಿಲ್ ಆರೋಪಿಗಳಿಗೆ 5 ಲಕ್ಷ ರು. ಸುಪಾರಿ ಕೊಟ್ಟಿರುವುದಲ್ಲದೇ ವಿವಿಧ ಮೂಲಗಳಿಂದ ಆರೋಪಿಗಳಿಗೆ ಹಣ ಬಂದಿರುವ ಶಂಕೆ ಇದೆ.

ಜನಿವಾರ ತೆಗೆಸಿದ್ದ ಇಬ್ಬರು ಬಂಧನ

ಕಲಬುರಗಿ: ನೀಟ್ ಬರೆಯಲು ಬಂದಿದ್ದ ವಿದ್ಯಾರ್ಥಿಗೆ ಜನಿವಾರ ತೆಗೆಯುವಂತೆ ಒತ್ತಾಯಿಸಿದ ಆರೋಪದ ಮೇಲೆ ಶರಣಗೌಡ ಮತ್ತು ಗಣೇಶ್ ಎಂಬ ಪರೀಕ್ಷಾ ಕೇಂದ್ರದ ಸಿಬ್ಬಂದಿಯನ್ನು ಪೊಲೀಸರು ಸೋಮವಾರ ಬಂಧಿಸಿದ್ದಾರೆ. ವಿದ್ಯಾರ್ಥಿ ಶ್ರೀಪಾದ್ ಪಾಟೀಲ್ ನೀಡಿದ ದೂರಿನ ಆಧಾರದ ಮೇಲೆ ಕಲಬುರಗಿಯ ಸ್ಟೇಷನ್ ಬಜಾರ್ ಪೊಲೀಸರು ಭಾರತೀಯ ನ್ಯಾಯ ಸಂಹಿತಾ ಕಾಯ್ದೆಯ ಸೆಕ್ಷನ್ 298ರ ಅಡಿಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಬಂಧಿತರು ಖಾಸಗಿ ಏಜೆನ್ಸಿಯಲ್ಲಿ ಕೆಲಸ ಮಾಡುತ್ತಿದ್ದು, ಅವರ ವಿರುದ್ಧ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುವುದು ಎಂದು ಕಲಬುರಗಿ ಪೊಲೀಸ್ ಆಯುಕ್ತ ಎಸ್.ಡಿ.ಶರಣಪ್ಪ ತಿಳಿಸಿದ್ದಾರೆ.

ಉಬರ್: ಆರ್‌ಸಿಬಿ ಅರ್ಜಿ ವಜಾ

ದೆಹಲಿ: ಐಪಿಎಲ್‌ನ ಸನ್‌ರೈಸರ್ಸ್ ಹೈದರಾಬಾದ್ ತಂಡದ ಸ್ಫೋಟಕ ಬ್ಯಾಟರ್ ಟ್ರಾವಿಸ್ ಹೆಡ್ ಅವರನ್ನೊಳಗೊಂಡ ಉಬರ್ ಮೋಟೋದ ಯೂಟ್ಯೂಬ್ ಜಾಹೀರಾತಿಗೆ ಮಧ್ಯಂತರ ತಡೆ ಕೋರಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಸಲ್ಲಿಸಿದ್ದ ಅರ್ಜಿಯನ್ನು ದೆಹಲಿ ಹೈಕೋರ್ಟ್ ಸೋಮವಾರ ವಜಾಗೊಳಿಸಿದೆ. ನ್ಯಾಯಮೂರ್ತಿ ಸೌರಭ್ ಬ್ಯಾನರ್ಜಿ, ಆಕ್ಷೇಪಾರ್ಹ ಜಾಹೀರಾತು ಕ್ರಿಕೆಟ್‌ಗೆ ಸಂಬಂಧಿಸಿದೆ. ಈ ಹಂತದಲ್ಲಿ ಜಾಹೀರಾತು ಸಮಸ್ಯಾತ್ಮಕ ಅಥವಾ ಕಾನೂನುಬಾಹಿರ ಎನ್ನಲಾಗುವುದಿಲ್ಲ. ಹೀಗಾಗಿ ಅದರಲ್ಲಿ ಹಸ್ತಕ್ಷೇಪ ಸಾಧ್ಯವಿಲ್ಲ. ಆದ್ದರಿಂದ, ಅರ್ಜಿಯನ್ನು ವಜಾಗೊಳಿಸಲಾಗಿದೆ ಎಂದು ನ್ಯಾಯಾಲಯ ಹೇಳಿದೆ.

ರೈತರ ಪಂಪ್‌ಸೆಟ್‌ಗೆ ಹಗಲಲ್ಲೇ ಕರೆಂಟ್

ಹಾವೇರಿ: ಕುಸುಮ್ ಯೋಜನೆ ಮೂಲಕ ಪ್ರತಿ ತಾಲೂಕಿನಲ್ಲಿ 20 ಮೆ.ವ್ಯಾ ಸಾಮರ್ಥ್ಯದ ಸೋಲಾರ್ ವಿದ್ಯುತ್ ಘಟಕ ಸ್ಥಾಪನೆ ಮಾಡಿ ಇದರಿಂದ ಹಗಲು ಹೊತ್ತಿನಲ್ಲಿಯೇ ರೈತರ ಪಂಪ್ ಸೆಟ್‌ಗಳಿಗೆ ವಿದ್ಯುತ್ ನೀಡಲು ಸರಕಾರ ತೀರ್ಮಾನ ಮಾಡಿದೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು. ಮಾಜಿ ಸಿಎಂ ಬಂಗಾರಪ್ಪ ಅವರ ಅವಧಿಯಲ್ಲಿ ರೈತರ ಪಂಪ್ ಸೆಟ್ ಗೆ ಉಚಿತ ವಿದ್ಯುತ್ ನೀಡಲಾಯಿತು. 2013 ರ ಕಾಂಗ್ರೆಸ್ ಸರಕಾರದ ವೇಳೆ ನಾನು ಇಂಧನ ಸಚಿವನಾಗಿದ್ದಾಗ ರೈತರ ಪಂಪ್ ಸೆಟ್‌ಗಳಿಗೆ ನೀಡುವ ತ್ರೀ ಫೇಸ್ ವಿದ್ಯುತ್ ಪೂರೈಕೆಯನ್ನು 6 ಗಂಟೆಯಿಂದ 7 ಗಂಟೆಗೆ ಹೆಚ್ಚಳ ಮಾಡಲಾಯಿತು ಎಂದು ಹೇಳಿದರು.

ಕ್ಷಮೆ ಕೇಳಲು ಚಲನಚಿತ್ರ ವಾಣಿಜ್ಯ ಮಂಡಳಿ ಪಟ್ಟು | ಗಾಯಕನ ವಿರುದ್ಧ ಎಫ್‌ಐಆರ್ ದಾಖಲು

ಸೋನು ನಿಗಮ್‌ಗೆ ಕನ್ನಡ ಚಿತ್ರರಂಗ ಬಹಿಷ್ಕಾರ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಕನ್ನಡ ಹಾಡುಗಳನ್ನು ಹೇಳುವಂತೆ ಕೇಳಿದ ಕನ್ನಡಿಗರನ್ನು ಪಹಲ್ಗಾಮ್ ಉಗ್ರರಿಗೆ ಹೋಲಿಕೆ ಮಾಡಿ ದುರ್ವರ್ತನೆ ತೋರಿಸಿದ ಗಾಯಕ ಸೋನು ನಿಗಮ್ ವಿರುದ್ಧ ಕನ್ನಡ ಚಿತ್ರರಂಗದಿಂದ ಅಸಹಕಾರ ನಿರ್ಣಯ ಕೈಗೊಳ್ಳಲಾಗಿದೆ. ಕನ್ನಡ ಚಿತ್ರರಂಗದಿಂದ ಜೀವನ ಕಟ್ಟಿಕೊಂಡ ಹಿಂದಿ ಗಾಯಕ ಸೋನು ನಿಗಮ್ ಕಾಲೇಜೊಂದರ ಕಾರ್ಯಕ್ರಮಕ್ಕೆ ಬಂದು ಕನ್ನಡದ ಹಾಡುಗಳನ್ನು ಹೇಳುವಂತೆ ಕೇಳಿದ ಕನ್ನಡಿಗರನ್ನು ಪಹಲ್ಗಾಮ್ ಉಗ್ರರಿಗೆ ಹೋಲಿಕೆ ಮಾಡಿ ಕುಚೇಷ್ಟೆ ಮೆರೆದಿದ್ದರು. ಇದರ ಬಳಿಕ ಕನ್ನಡಪರ ಸಂಘಟನೆಗಳು ಕ್ಷಮೆ ಕೋರುವಂತೆ ಆಗ್ರಹಿಸಿದ ನಂತರ, ಕ್ಷಮೆ ಕೇಳದೇ ತನ್ನ ಹೇಳಿಕೆಗೆ ಸ್ಪಷ್ಟನೆ ಕೊಡುವ ಜತೆಗೆ ಮತ್ತೊಮ್ಮೆ ಕನ್ನಡಿಗರನ್ನು ಪುಂಡರು ಎಂದು ಚಿತ್ರಿಸಿ ವಿಡಿಯೋ ಹರಿಬಿಟ್ಟಿದ್ದರು. → 4

ನಾರಾಯಣ ಗೌಡ ನೇತೃತ್ವದಲ್ಲಿ ಕರವೇ ಪ್ರತಿಭಟನೆ.

ಬಂಧನಕ್ಕೆ ಒತ್ತಾಯ

ಕಾಶ್ಮೀರದಲ್ಲಿ ಇತ್ತೀಚಿಗೆ ನಡೆದ ಭಯೋತ್ಪಾದನಾ ದಾಳಿಗೆ ಸಂಬಂಧ ಕಲ್ಪಿಸಿ ಕನ್ನಡ ಮತ್ತು ಕನ್ನಡಿಗರಿಗೆ ಅವಮಾನ ಮಾಡಿರುವ ಗಾಯಕ ಸೋನು ನಿಗಮ್‌ನನ್ನು ಬಂಧಿಸಿ ಕಾನೂನು ಪ್ರಕಾರ ಶಿಕ್ಷೆ ವಿಧಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷ ನಾರಾಯಣಗೌಡ ರಾಜ್ಯ ಸರಕಾರವನ್ನು ಒತ್ತಾಯಿಸಿದ್ದಾರೆ.

ಸೋನು ಕ್ಷಮೆ

Sorry Karnataka.

My Love for you, is bigger than my Ego. Love you always.

ಕ್ಷಮೆ ಯಾಚಿಸಲು ನಿರಾಕರಿಸಿದ್ದ ಗಾಯಕ ಸೋನು ನಿಗಮ್, ಬಹಿಷ್ಕಾರದ ಸುದ್ದಿ ತಿಳಿಯುತ್ತಲೇ ಕ್ಷಮೆ ಯಾಚಿಸಿದ್ದಾರೆ. 'Sorry Karnataka', ನಿಮ್ಮ ಮೇಲಿನ ನನ್ನ ಪ್ರೀತಿ ಅಹಂಗಿಂತ ದೊಡ್ಡದು. ಯಾವಾಗಲೂ ನಿಮ್ಮನ್ನು ಪ್ರೀತಿಸುವೆ ಎಂದು ಇನ್ಸ್ಟಾಗ್ರಾಮ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.

ಗೋವಾಕ್ಕೆ ಹೆದರಿದ ಪ್ರಧಾನಿ

ಹುಬ್ಬಳ್ಳಿ: ಗೋವಾ ರಾಜ್ಯಕ್ಕೆ ಹೆದರಿಕೊಂಡು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಮಹದಾಯಿ ಯೋಜನೆಗೆ ಅನುಮತಿ ಕೊಡಿಸುತ್ತಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಅವರು ಭಾನುವಾರ ಗಂಭೀರ ಆರೋಪ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಹ್ಲಾದ್ ಜೋಶಿ ಮೊದಲು ಮಹದಾಯಿ ಬಗ್ಗೆ ಮಾತಾಡಲಿ. ಮಹದಾಯಿ ಯೋಜನೆಗೆ ಎನ್ವಿರಾನ್ಮೆಂಟ್ ಕ್ಲಿಯರೆನ್ಸ್ ಯಾಕೆ ಕೊಡಿಸುತ್ತಿಲ್ಲಾ? ಗೋವಾಕ್ಕೆ ಹೆದರಿಕೊಂಡು ಮೋದಿ ಅವರು ಅನುಮತಿ ಕೊಡಿಸುತ್ತಿಲ್ಲ. ಪ್ರಲ್ಹಾದ್ ಜೋಶಿ ಆ ಬಗ್ಗೆ ಪ್ರಧಾನಿ ಮೋದಿ ಮುಂದೆ ಮಾತಾಡುತ್ತಿಲ್ಲ. ನಾವು ಅನೇಕ ಸಲ ಕೇಂದ್ರಕ್ಕೆ ಹೋಗಿ ಮನವಿ ಮಾಡಿದ್ದೇವೆ. ಆದರೂ ಪ್ರಯೋಜನವಾಗಿಲ್ಲ ಎಂದು ಹೇಳಿದರು. ಆಧಾರರಹಿತ ಆರೋಪಗಳನ್ನು ಮಾಡುವ ಬದಲು ಕೇಂದ್ರ ಸಚಿವ ಸಂಪುಟದ ಹಿರಿಯ ಸದಸ್ಯರಾಗಿ ಜೋಶಿ ಅವರು ದೀರ್ಘಕಾಲದಿಂದ ಬಾಕಿ ಇರುವ ಯೋಜನೆಗೆ ಅಗತ್ಯವಾದ ಅನುಮೋದನೆಗಳನ್ನು ಪಡೆಯಲು ತಮ್ಮ ಪ್ರಭಾವವನ್ನು ಬಳಸಬೇಕು. ಮಹದಾಯಿ ಯೋಜನೆ ಕುರಿತು ಕೇಂದ್ರದ ಮೇಲೆ ಒತ್ತಡ ಹೇರಬೇಕು ಎಂದು ತಿಳಿಸಿದರು.



ಸೊಂಪಾದ ಪುಟಗಳು

ಶಾಂತಿಯ ತೋಟಕ್ಕೆ ಒಲೈಕೆಯೇ ತೊಡಕು
ಅಶ್ವತ್ಥಕಟ್ಟೆ
ರಂಜಿತ್ ಎಚ್. ಅಶ್ವತ್ಥ

ಕನ್ನಡ ಉಳಿಸುವುದು, ಬೆಳೆಸುವುದು ನಮ್ಮ ಕೈಲಿದೆ!
ವಿಶ್ವರಂಗ
ರಂಗಸ್ವಾಮಿ ಮೂಕನಹಳ್ಳಿ

ದಾರಿದೀಪೋಕ್ತಿ

ಯಾರೂ ಸಹ ಯಾವತ್ತೂ ಬ್ಯುಸಿಯಾಗಿರುವುದಿಲ್ಲ. ನೀವು ಯಾವಾಗ ಕೇಳಿದರೂ ಅವರು ಬ್ಯುಸಿ ಎಂದು ಹೇಳಿದರೆ ಅವರಿಗೆ ನಿಮ್ಮನ್ನು ಭೇಟಿಯಾಗುವ ಮನಸ್ಸು ಇಲ್ಲ ಎಂದರ್ಥ. ನಿಮ್ಮನ್ನು ಭೇಟಿ ಮಾಡಲು ಬಯಸಿದವರು ಸಮಯ ಇಲ್ಲ ಎನ್ನುವ ಕಾರಣ ನೀಡುವುದಿಲ್ಲ.

ವಕ್ರತುಂಡೋಕ್ತಿ

ಎಲ್ಲಿ ತನಕ ಏನೂ ಆಗುವುದಿಲ್ಲವೋ, ಅಲ್ಲಿ ತನಕ ವಿಮಾನ ಪ್ರಯಾಣ ಅತ್ಯಂತ ಸುರಕ್ಷಿತ.

ರೌಡಿಶೀಟರ್ ಕೊಲೆ

ಮೈಸೂರು: ತಾಲೂಕಿನ ವರುಣಾ ಗ್ರಾಮದ ಬಳಿಯ ಹೋಟೆಲ್ ಮುಂಭಾಗ ಭಾನುವಾರ ತಡರಾತ್ರಿ ರೌಡಿಶೀಟರ್‌ನನ್ನು ಮಚ್ಚಿನಿಂದ ಹಲ್ಲೆ ಮಾಡಿ ದುಷ್ಕರ್ಮಿಗಳು ಕೊಲೆ ಮಾಡಿದ್ದಾರೆ. ನಗರದ ಕ್ಯಾತಮಾರನಹಳ್ಳಿ ನಿವಾಸಿ ಕಾರ್ತಿಕ್ (33) ಕೊಲೆಯಾದ ವ್ಯಕ್ತಿ. ಹಳೆ ವೈಷಮ್ಯದಿಂದ ಕೊಲೆ ನಡೆದಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ವರುಣಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

ಫನ್‌ತರಂಗ

- ರಘುಪತಿ ಶೃಂಗೇರಿ -

ವೇದಿಕೆ ಮೇಲೆ ಕುಸಿದುಬಿದ್ದ 'ಲೈಟ್ ಕಂಬ'. ಓಡಿ ಜೀವ ಉಳಿಸಿಕೊಂಡ ಸಂಸದ

ಸಮಾಚಾರ ಸಣ್ಣದಲ್ಲ

ಇಂದು ನಾಟಕ ಪ್ರದರ್ಶನ

ಬೆಂಗಳೂರು: ಜೆ.ಪಿ.ನಗರದ ರಂಗಶಂಕರದಲ್ಲಿ ಇಂದು ಸಂಜೆ 7.30ಕ್ಕೆ ವಿಶ್ವಾಮಿತ್ರ ಮೇನಕೆ ಡ್ಯಾನ್ಸ್ ಮಾಡೋದು ಏನಕೆ ASK MrYNK ನಾಟಕ ಪ್ರದರ್ಶನವಾಗಲಿದೆ. ಚಿತ್ರಶೇಖರ್ ಎನ್.ಎಸ್ ನಿರ್ದೇಶನ ಮಾಡಿದ್ದು, ಜೋಗಿ ರಚನೆ ಮಾಡಿದ್ದಾರೆ. ನಾಟಕದ ಬಗ್ಗೆ ಜಡ್ಡು ಹಿಡಿದ ಸಮಾಜದ ಬಗ್ಗೆ ಮೇಲು, ಮಧ್ಯಮ ವರ್ಗದ ಜನರ ಮೌನ, ಕೆಳ ಮಧ್ಯಮ ವರ್ಗದವರ ವಾಚಾಳಿತನದ ಮಧ್ಯಮ ವರ್ಗದವರ ಅಸಹಾಯಕತೆಯನ್ನು ವೈಎನ್‌ಕೆಯವರು ತಮ್ಮ ವ್ಯಂಗ್ಯಭರಿತ ಹಾಸ್ಯ ಲೇಖನಗಳಲ್ಲಿ ಚಿತ್ರಿಸಿದ್ದಾರೆ. ಜೋಗಿಯವರು ವೈಎನ್‌ಕೆ ದಾಟಿಯನ್ನು ವಿಸ್ತರಿಸುತ್ತಾ , ವಿವಾಹ, ದಾಂಪತ್ಯ, ಗಂಡು ಹೆಣ್ಣಿನ ಬಿರುಕಿನ ಸಂಬಂಧದ ಹತಾಶೆಯನ್ನು ನಾಟಕ ರೂಪದಲ್ಲಿ ವಿಶಿಷ್ಟವಾಗಿ ಕಟ್ಟಿ ಕೊಟ್ಟಿದ್ದಾರೆ. ಈ ಸೂಕ್ಷ್ಮನೋಟದ ಗಂಭೀರ ನಾಟಕವನ್ನು ರಂಗದ ಮೇಲೆ ಪ್ರಸ್ತುತ ಪಡಿಸುವ ಪ್ರಯತ್ನ ಸಂಚಯ ತಂಡದ್ದಾಗಿದೆ. ಬುಕ್ ಮೈ ಶೋನಲ್ಲಿ ಕೂಡ ಟಿಕೆಟ್ ಲಭ್ಯ.

ಪರಾರಿಯಾಗಿದ್ದ ಕೈದಿ ಸೆರೆ

ಬೆಂಗಳೂರು: ಅನಾರೋಗ್ಯದ ಕಾರಣದಿಂದ

ನಗರದ ವಿಕ್ಟೋರಿಯಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುವಾಗ ಪರಾರಿಯಾಗಿದ್ದ ವಿಚಾರಣಾಧೀನ ಕೈದಿಯನ್ನು ವಿ.ವಿ.ಪುರ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ತುಮಕೂರು ಬಸ್ ನಿಲ್ದಾಣದಲ್ಲಿದ್ದ ಆರೋಪಿ ಚಂದ್ರಶೇಖರ್ ಅಲಿಯಾಸ್ ಚಂದ್ರು (32) ಎಂಬಾತನನ್ನು ವಶಕ್ಕೆ ಪಡೆಯಲಾಗಿದ್ದು, ಬೆಂಗಳೂರಿಗೆ ಕರೆತರಲಾಗಿದೆ.

2023ರಲ್ಲಿ ಸುಬ್ರಹ್ಮಣ್ಯನಗರ ಠಾಣೆಯಲ್ಲಿ ದಾಖಲಾಗಿದ್ದ ಡಕಾಯಿತಿ ಪ್ರಕರಣದಲ್ಲಿ ತುಮಕೂರು ಜಿಲ್ಲೆಯ ಗುಬ್ಬಿ ಮೂಲದ ಚಂದ್ರಶೇಖರ್‌ನನ್ನು ಬಂಧಿಸಲಾಗಿತ್ತು. ಎರಡು ವರ್ಷಗಳಿಂದ ಪರಪ್ಪನ ಅಗ್ರಹಾರ ಕಾರಾಗೃಹದಲ್ಲಿ ವಿಚಾರಣಾಧೀನ ಕೈದಿಯಾಗಿದ್ದ ಚಂದ್ರಶೇಖರ್‌ಗೆ ಮೇ 2ರಂದು ಎದೆ ನೋವು ಹಾಗೂ ವಾಂತಿ ಹೆಚ್ಚಾಗಿದ್ದರಿಂದ ಜೈಲಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗಿತ್ತು. ಬಳಿಕ ಹೆಚ್ಚಿನ ಚಿಕಿತ್ಸೆಗಾಗಿ ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು.

ಎಸ್ಸೆಸ್ಸೆಲ್ಸಿ: ರಕ್ಷಿತಾಗೆ ಶೇ.98ರಷ್ಟು ಅಂಕ

ಬೆಂಗಳೂರು: ವಿಜಯನಗರದಲ್ಲಿರುವ

ಕಾರ್ಡಿಯಲ್ ಹೈಸ್ಕೂಲ್ ವಿದ್ಯಾರ್ಥಿ ರಕ್ಷಿತಾ. ಪಿ ರವರು 2024-2025 ನೇ ಎಸ್‌ಎಸ್‌ಎಲ್ ಸಿ ಯಲ್ಲಿ ಶೇಕಡ 98 ಅಂಕವನ್ನು ಪಡೆದಿದ್ದಾರೆ.

ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಅಭಿಪ್ರಾಯ | ಕನ್ನಡದ ಮಹತ್ವದ ಕೃತಿಗಳು ವಿಶ್ವದ ಭಾಷೆಗಳಿಗೆ ಭಾಷಾಂತರಗೊಳ್ಳಲು ಸಂಪೂರ್ಣ ಸಹಕಾರ

ಹಂಪನಾ ಕನ್ನಡ ನೆಲದ ಶ್ರೇಷ್ಠ ಸಾಂಸ್ಕೃತಿಕ ವ್ಯಕ್ತಿತ್ವ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಹಂಪನಾ ಕನ್ನಡ ನೆಲದ ಶ್ರೇಷ್ಠ ಸಾಂಸ್ಕೃತಿಕ ವ್ಯಕ್ತಿತ್ವ. ಇವರು ರಚಿಸಿರುವ ಚಾರು ವಸಂತ ವಿಶೇಷ ಕೃತಿಯಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಕನ್ನಡ ವಿಶ್ವದ ಎಲ್ಲಾ ಭಾಷೆಗಳಿಗೆ ಅನುವಾದಗೊಂಡರೆ ಕನ್ನಡದ ಬೆಳವಣಿಗೆಗೆ ಕಾರಣವಾಗುತ್ತದೆ. ಕನ್ನಡದ ಮಹತ್ವದ ಕೃತಿಗಳು ಇಂಗ್ಲಿಷ್ ಸೇರಿ ವಿಶ್ವದ ಭಾಷೆಗಳಿಗೆ ಭಾಷಾಂತರಗೊಳ್ಳಲು ಸರಕಾರದಿಂದ ಸಂಪೂರ್ಣ ಸಹಕಾರ ನೀಡಲಾಗುವುದು.

-ಸಿದ್ದರಾಮಯ್ಯ, ಮುಖ್ಯಮಂತ್ರಿ

ಕಮಲಾ ಹಂಪನಾ ಸಾಹಿತ್ಯ ವೇದಿಕೆ ಮತ್ತು ಕರ್ನಾಟಕ ಚಿತ್ರಕಲಾ ಪರಿಷತ್ ಸಹಯೋಗದಲ್ಲಿ ಆಯೋಜಿಸಿದ್ದ ಹಂಪನಾ ಅವರ ಚಾರು ವಸಂತ ದೇಸೀ ಕಾವ್ಯದ ಪರ್ಷಿಯನ್ ಭಾಷಾ ಕೃತಿ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಹಂಪನಾ ಅವರ ಚಾರು ವಸಂತ ಕಾವ್ಯ, ನಾಟಕವಾಗಿ ಕೂಡ ಜನಮನ್ನಣೆ ಗಳಿಸಿದೆ. ಇಲ್ಲಿಯವರೆಗೆ 16 ಭಾಷೆಗಳಿಗೆ ತರ್ಜುಮೆ ಆಗಿ, ಈಗ 17ನೇ ಭಾಷೆಯಾಗಿ ಪರ್ಷಿಯನ್‌ಗೆ ಅನುವಾದಗೊಂಡಿರುವುದು ಕನ್ನಡದ ಹೆಮ್ಮೆ. ನಾನು ಸಾಹಿತಿ ಅಲ್ಲ, ಆದರೆ, ಸಾಹಿತ್ಯ ಮತ್ತು ಸಾಹಿತಿಗಳ ಒಡನಾಟ ಇದೆ. ಚಾರು ವಸಂತ ಕಾವ್ಯ ಮಲ ಹೊರುವ ಪದ್ಧತಿ ಬಗ್ಗೆ ಇರುವ ಕೃತಿಯಾಗಿದೆ ಎಂದರು.



ಹಂಪನಾ ಅವರ ಚಾರು ವಸಂತ ದೇಸೀ ಕಾವ್ಯದ ಪರ್ಷಿಯನ್ ಭಾಷಾ ಕೃತಿಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಿದರು.

ಜಾತಿ ವ್ಯವಸ್ಥೆ ರೂಪಿಸಿದ ಶಾಪ ಅಸ್ಪೃಶ್ಯತೆ. ಇದು ಅಳಿಯಬೇಕು. ಸಾಮಾಜಿಕ, ಆರ್ಥಿಕ ಶಕ್ತಿ ಎಲ್ಲರಿಗೂ ಸಿಕ್ಕಾಗ ಮಾತ್ರ ಚಲನೆ ಇಲ್ಲದ ಜಾತಿ ವ್ಯವಸ್ಥೆ ಅಳಿಯಲು ಸಾಧ್ಯ ಎಂಬುದನ್ನು ಈ ಕೃತಿ ತಿಳಿಸುತ್ತದೆ. ಕನ್ನಡ ಭಾಷೆಯ ಉಳಿವು, ಬೆಳವಣಿಗೆಗೆ ಇಂತಹ ಕೃತಿಗಳು ಬರಬೇಕು. ನಾನು ಕನ್ನಡ ಕಾವಲು ಸಮಿತಿಯ ಮೊದಲ ಅಧ್ಯಕ್ಷನಾದ ಬಳಿಕ ಕೇಂದ್ರ ಸರಕಾರಕ್ಕೆ ಬರೆಯುವ ಪತ್ರಗಳ ಹೊರತಾಗಿ ಬೇರೆ ಕಡೆ ಇಂಗ್ಲಿಷ್ ಬಳಸುತ್ತಿರಲಿಲ್ಲ. ಹೀಗಾಗಿ ನನಗೆ ಇಂಗ್ಲಿಷ್ ಹೆಚ್ಚು ಬರದಂತಾಯಿತು ಎಂದು ತಿಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ, , ಸಾಹಿತ್ಯ ಅಕಾಡಮಿ ಅಧ್ಯಕ್ಷ ಮುಕುಂದರಾಜ್ ಗಣ್ಯರು ಉಪಸ್ಥಿತರಿದ್ದರು.

ಕನ್ನಡ ಕೃತಿ ಆಡಿಯೊ-ವಿಡಿಯೊ ರೂಪದಲ್ಲಿ ಬರಲಿ

ಹಿರಿಯ ಸಾಹಿತಿ ಹಂಪನಾ ಮಾತನಾಡಿ, ಕನ್ನಡದ ಕಾವ್ಯ ಜಗತ್ತಿನ ಬೇರೆ ಬೇರೆ ಭಾಷೆಗೆ ಅನುವಾದಗೊಳ್ಳುತ್ತಾ ಇರುವುದು ಸಂತೋಷದ ಸಂಗತಿಯಾಗಿದೆ. ಹಳೆಗನ್ನಡ ಕೃತಿಗಳು ಮತ್ತು ಅವುಗಳ ಸಾರಾಂಶವನ್ನು ಆಡಿಯೊ-ವಿಡಿಯೊ ರೂಪದಲ್ಲಿ ಬರುವುದರಿಂದ ಇಂದಿನ ಯುವಜನರು ಹೆಚ್ಚು ಬಳಸುತ್ತಾರೆ. ಈ ಯೋಜನೆಗೆ ಸರಕಾರ ಅನುಮೋದನೆ ಕೊಟ್ಟರೆ ಕನ್ನಡ ಉಳಿಯುತ್ತದೆ, ಬೆಳೆಯುತ್ತದೆ. ಯುವಜನರು ಮನಸ್ಸು ಮಾಡಿದರೆ ಕನ್ನಡ ಉಳಿಸುತ್ತಾರೆ. ರಾಜ್ಯದಲ್ಲಿ ದ್ವಿಭಾಷಾ ಪರಿಕಲ್ಪನೆ ಜಾರಿಯಾಗಬೇಕು. ಎರಡು ಭಾಷೆಯನ್ನು ಮಾತ್ರ ಕಲಿಯುವುದರಿಂದ ಕನ್ನಡ ಭಾಷೆ ಉಳಿಯುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದರು.

ಆಕ್ಸ್‌ಫರ್ಡ್ ಯುನಿವರ್ಸಿಟಿಯಲ್ಲಿ ಪ್ರಪಂಚದ ಬೇರೆ ಭಾಷೆಗಳಲ್ಲಿರುವ ಪದಗಳನ್ನು ಆಯ್ಕೆ ಮಾಡಿಕೊಂಡು ಅದನ್ನು ಇಂಗ್ಲಿಷ್ ಪದವಾಗಿ ಬಳಕೆ ಮಾಡುವ ಪರಿಪಾಠವಿದೆ. ಈ ರೀತಿ ಅನೇಕ ಬೇರೆ ಭಾಷೆಯ ಪದಗಳು ಕನ್ನಡದಲ್ಲಿ ಬಳಕೆಯಲ್ಲಿವೆ. ಈ ಪರ್ಷಿಯನ್ ಭಾಷೆಯ ಪದಗಳು ಭೂಮಿಗೆ ಸಂಬಂಧಿಸಿದಂತೆ ಬಳಕೆಯಲ್ಲಿವೆ. ಕಾರು,ಜೀಪು ಪದಗಳು ಕನ್ನಡದ್ದೇ ಆಗಿವೆ. ಬೇರೆ ಭಾಷೆಯ ಪದಗಳು ಕನ್ನಡದ್ದೇ ಆಗಿಹೋಗಿವೆ.

-ಬಿ.ಎಲ್. ಶಂಕರ್, ಚಿತ್ರಕಲಾ ಪರಿಷತ್ತಿನ ಅಧ್ಯಕ್ಷ

ಕಸಾಪ 111ನೇ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಡಾ. ಮಹೇಶ್ ಜೋಶಿ ಅಭಿಮತ

ಕಸಾಪ ಕನ್ನಡಿಗರ ಭವಿಷ್ಯದ ದಿಕ್ಸೂಚಿ

ಬೆಂಗಳೂರು: ಏಳು ಕೋಟಿ ಕನ್ನಡಿಗರ ಪ್ರಾತಿನಿಧಿಕ ಸಂಸ್ಥೆ ಎನ್ನಿಸಿಕೊಂಡಿರುವ ಕಸಾಪ ಕನ್ನಡಿಗರೆಲ್ಲರ ಮಾತೃ ಸಂಸ್ಥೆಯಾಗಿದ್ದು, ಇದು ಕನ್ನಡಿಗರ ಭವಿಷ್ಯದ ದಿಕ್ಸೂಚಿ ಎಂದು ಕಸಾಪ ಅಧ್ಯಕ್ಷ ನಾಡೋಜ ಡಾ. ಮಹೇಶ್ ಜೋಶಿ ಹೇಳಿದರು.

ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣ ಪರಿಷನ್ಮಂದಿರದಲ್ಲಿ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 111ನೆಯ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಮಾತನಾಡಿ,ಕನ್ನಡ ಭಾಷೆ, ಸಾಹಿತ್ಯ, ಕಲೆ, ಜಾನಪದ, ಸಂಸ್ಕೃತಿಗಳ ಸಂವರ್ಧನೆ ಹಾಗೂ ಸಂರಕ್ಷಣೆಯ ಮಹದಾಶಯದೊಂದಿಗೆ ಹುಟ್ಟಿದ ಕನ್ನಡ ಸಾಹಿತ್ಯ ಪರಿಷತ್ತು 111ನೆಯ ಸಂಸ್ಥಾಪನಾ ದಿನವನ್ನು ಆಚರಿಸಿ ಕೊಳ್ಳುತ್ತಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್‌ರ ಪೋಷಣೆ ಮತ್ತು ಸರ್.ಎಂ. ವಿಶ್ವೇಶ್ವರಯ್ಯ ಮತ್ತು ಸರ್.ಮಿರ್ಜಾ ಇಸ್ಮಾಯಿಲ್ ಬೆಂಬಲದಿಂದ ರೂಪುಗೊಂಡಿದ್ದು,ಭವಿಷ್ಯದ ಕನ್ನಡಿಗರ ದಿಕ್ಸೂಚಿಯಾಗಿದೆ ಎಂದರು.

ಈ ಜಾಗಕ್ಕೆ ಬರುವುದೇ ಪುಣ್ಯದ ಕೆಲಸ, ಮೇರು ಸಾಧಕರು ಇಲ್ಲಿ ಓಡಾಗಿದ್ದಾರೆ. ಅವರ ನಡೆ-ನುಡಿಗಳ ನಡುವೆ ಅಂತರವಿರಲಿಲ್ಲ. ಅವರು ತೋರಿದ ಹಾದಿಯಲ್ಲಿ ಸಾಗುತ್ತಿರುವ ಪರಿಷತ್ತು ನಮ್ಮೆಲ್ಲರ ಪಾಲಿಗೆ ದೇಗುಲವಿದ್ದಂತೆ

-ಶ್ರೀಧರ್, ಕಲಾವಿದ

ಮೊದಲನೆಯ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಕಸಾಪ ಆರಂಭವಾಗಿದ್ದು, ನಿರಂತರವಾಗಿ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳನ್ನು ಆಯೋಜಿಸುತ್ತಾ ಬಂದಿದೆ. ಕನ್ನಡ ನಾಡು-ನುಡಿಗಳ ಕುರಿತು ಚಿಂತನೆ ನಡೆಸುವ ಮಹತ್ವದ ಕೊಡುಗೆ ಜತೆಗೆ ಕನ್ನಡಿಗರು ಒಂದಾಗಿ ಸೇರುವ ತಾಣಗಳಾಗಿ ಶ್ರೀಮಂತ ಕೊಡುಗೆ ನೀಡಿವೆ. ರಾಜ್ಯದ ಏಕೀಕರಣ ಮತ್ತು ನಾಮಕರಣಕ್ಕೆ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಗಳು ನೀಡಿದ ಕೊಡುಗೆ ಅಪಾರ. ಹೀಗೆ ಹಲವು ಮಹತ್ವದ ಕೊಡುಗೆಗಳನ್ನು ನೀಡುತ್ತಾ 110 ವರ್ಷಗಳ ಸುದೀರ್ಘ ಇತಿಹಾಸದಲ್ಲಿ ತನ್ನ ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡು ಬಂದಿರುವುದೇ ಬಹು ದೊಡ್ಡ ಹೆಗ್ಗಳಿಕೆ ಎಂದು ಹೇಳಿದರು.

ನಗರದ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣ ಪರಿಷನ್ಮಂದಿರದಲ್ಲಿ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ತಿನ 111ನೆಯ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಸಾಧಕರಿಗೆ ದತ್ತಿ ಪುರಸ್ಕಾರ ನೀಡಿ ಗೌರವಿಸಲಾಯಿತು.

ಕನ್ನಡ ಮನೆ-ಶಾಲೆಗಳ ಬುನಾದಿಯಲ್ಲಿ ಬೆಳೆಯ ಬೇಕು, ಕನ್ನಡ ಮೊದಲ ಆದ್ಯತೆಯಾಗುವ ಕಡೆಗೆ ಪ್ರಯತ್ನಗಳು ಸಾಗಬೇಕು, ನಾವು ಗೋಪುರದ ಕಡೆ ಗಮನ ಹರಿಸಿ ಬುನಾದಿಯನ್ನು ನಿರ್ಲಕ್ಷಿಸಬಾರದು. ಇಂತಹ ಪ್ರಯತ್ನ ಕನ್ನಡ ಸಾಹಿತ್ಯ ಪರಿಷತ್ತಿನಿಂದ ಮಾತ್ರ ಸಾಧ್ಯ.

-ರವಿಶಂಕರ್ ಕೆ. ಭಟ್, ಉದಯವಾಣಿ ಸಮೂಹ ಸಂಪಾದಕ

ಈ ವೇಳೆ ಮೈಸೂರಿನ ಸ.ರ.ಸುದರ್ಶನ ಅವರಿಗೆ ಕನ್ನಡ ಚಳುವಳಿ ವೀರಸೇನಾನಿ ಮ.ರಾಮಮೂರ್ತಿ' ದತ್ತಿ ಪುರಸ್ಕಾರ, ದಕ್ಷಿಣ ಕನ್ನಡದ ಎಚ್.ಶಕುಂತಲಾ ಭಟ್ ಮತ್ತು ತುಮಕೂರಿನ ವಿಜಯ ಮೋಹನ್ ಅವರಿಗೆ ಪದ್ಮಭೂಷಣ ಡಾ.ಬಿ.ಸರೋಜ ದೇವಿ ದತ್ತಿ ಪುರಸ್ಕಾರ'. ಬೆಂಗಳೂರಿನ ಗುರುದೇವ ನಾರಾಯಣ ಕುಮಾರ್ ಮತ್ತು ಶಿವಮೊಗ್ಗದ ಡಿ.ಬಿ.ರಜಿಯಾ ಅವರಿಗೆ ಸತ್ಯವತಿ ವಿಜಯರಾಘವ ಚಾರಿಟಬಲ್ ಟ್ರಸ್ಟ್ ಧರ್ಮದರ್ಶಿ ದತ್ತಿ ಪುರಸ್ಕಾರ' ಮತ್ತು ಧಾರವಾಡದ ಶ್ರೀ ಗುರುಬಸವ ಮಹಾಮನೆಯ ಶ್ರೀ ಬಸವಾನಂದ ಸ್ವಾಮಿಗಳಿಗೆ ಡಾ.ಎಚ್. ವಿಶ್ವನಾಥ್ ಮತ್ತು ಎಂ.ಎಸ್.ದತ್ತಿ ಪುರಸ್ಕಾರ ನೀಡಿ ಗೌರವಿಸಲಾಯಿತು.

ನಗರದಲ್ಲಿ ಮಳೆಗಾಲಕ್ಕೆ ಸಜ್ಜಾಗಿರಿ

ಬೆಂಗಳೂರು: ನಗರದಲ್ಲಿ ಮಳೆಗಾಲದ ವೇಳೆ ಸದಾ

ಸನ್ನದ್ಧರಾಗಿರಲು ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಬಿಬಿಎಂಪಿ ಆಡಳಿತಾಧಿಕಾರಿ ತುಷಾರ್ ಗಿರಿನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಂಗಾರು ಮಳೆ ಆರಂಭವಾಗುತ್ತಿದ್ದು, ನಗರದಲ್ಲಿ ಸಂಭವನೀಯ ಪ್ರವಾಹ, ಮಳೆ ಅನಾಹುತಗಳನ್ನು ತಡೆಗಟ್ಟಲು ಹಾಗೂ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವ ಸಲುವಾಗಿ ವಿಕಾಸಸೌಧದಲ್ಲಿ ಅಧಿಕಾರಿಗಳ ಜತೆ ಸಭೆ ನಡೆಸಿ ಮಾತನಾಡಿ, ನಗರದಲ್ಲಿ 209 ಪ್ರವಾಹ ಪೀಡಿತ ಪ್ರದೇಶಗಳಿದ್ದು, ಈಗಾಗಲೇ 166 ಸ್ಥಳಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಬಾಕಿ 43 ಪ್ರವಾಹ ಪೀಡಿತ ಪ್ರದೇಶಗಳಲ್ಲಿ ಯಾವುದೇ ಸಮಸ್ಯೆಯಾಗದಂತೆ ಸೂಕ್ತ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕಿದ್ದು, ಆಯಾ ವಲಯ ಹಿರಿಯ ಅಧಿಕಾರಿಗಳು ಖುದ್ದು ಪ್ರವಾಹ ಪೀಡಿತ ಸ್ಥಳಗಳಿಗೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಬೇಕು ಎಂದು ಸೂಚನೆ ನೀಡಿದರು.

ಮೆಟ್ರೋ, ಕೆ-ರೈಡ್, ಕೆಪಿಟಿಸಿಎಲ್ ಸೇರಿದಂತೆ ಇನ್ನಿತರೆ ಇಲಾಖೆಗಳ ವತಿಯಿಂದ ನಗರದಾದ್ಯಂತ ಕಾಮಗಾರಿಗಳು ನಡೆಯುತ್ತಿದ್ದು, ಈ ಸ್ಥಳಗಳಲ್ಲಿ ದುರಸ್ತಿಯಾಗಿರುವ ಕಾಲುವೆಗಳ ಪಟ್ಟಿಯನ್ನು ಸಿದ್ಧಪಡಿಸಿ ಆಯಾ ಸಂಬಂಧಪಟ್ಟ ಇಲಾಖೆಗಳಿಗೆ ವರದಿ ನೀಡಬೇಕು. ಸಂಬಂಧಟ್ಟ ಇಲಾಖೆಗಳು ದುರಸ್ತಿ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಮಳೆ ಪ್ರಾರಂಭವಾಗುವುದಕ್ಕೂ ಮುಂಚಿತವಾಗಿ ಪೂರ್ಣಗೊಳಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.

ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಮಾತನಾಡಿ, ನಗರದಲ್ಲಿ ಮಳೆಯಾದ ವೇಳೆ ಹೆಚ್ಚು ಸಮಸ್ಯೆ ಕಂಡುಬರುವ ಸ್ಥಳಗಳಿಗೆ ಅಧಿಕಾರಿಗಳು ಖುದ್ದು ಭೇಟಿ ನೀಡಿ ಪರಿಶೀಲಿಸಬೇಕು. ಅನಂತರ ಯಾವ ಸಮಸ್ಯೆಗಳಿವೆ ಎಂಬುದನ್ನು ಗುರುತಿಸಿ ಇರುವ ಸಮಸ್ಯೆಯನ್ನು ಬಗೆಹರಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಮಾರ್ಚ್ ತಿಂಗಳಲ್ಲಿ ಪಾಲಿಕೆ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿ 82 ಕಡೆ ನೀರು ನಿಲ್ಲುವ ಸ್ಥಳಗಳನ್ನು ಸಂಚಾರಿ ಪೊಲೀಸ್ ವಿಭಾಗವು ಗುರುತಿಸಿದ್ದು, ಪಾಲಿಕೆಗೆ ಪಟ್ಟಿಯನ್ನು ನೀಡಲಾಗಿದೆ. ಈ ಪೈಕಿ ಸಂಬಂಧಪಟ್ಟ ಎಂಜಿನಿಯರ್‌ಗಳು ಸಂಚಾರಿ ಪೊಲೀಸ್ ವಿಭಾಗ ನೀಡಿರುವ ಪಟ್ಟಿಯ ಅನುಸಾರ ಸ್ಥಳ ಪರಿಶೀಲಿಸಿ ಸೈಡ್ ಡ್ರೈನ್ ಗಳಲ್ಲಿ ಹೂಳೆತ್ತಿ ಸ್ವಚ್ಛಗೊಳಿಸಬೇಕು. ಸಂಚಾರ ದಟ್ಟಣೆಯಾಗುವುದನ್ನು ನಿಯಂತ್ರಿಸಲು ರಸ್ತೆಯಲ್ಲಿ ನೀರು ನಿಲ್ಲದಂತೆ ಸೂಕ್ತ ಕ್ರಮ ವಹಿಸಬೇಕು.

-ತುಷಾರ್ ಗಿರಿನಾಥ್, ಬಿಬಿಎಂಪಿ ಆಡಳಿತಾಧಿಕಾರಿ

ಈ ವೇಳೆ ವಿಶೇಷ ಆಯುಕ್ತ ರಾದ ಡಾ. ಕೆ. ಹರೀಶ್ ಕುಮಾರ್, ಅವಿನಾಶ್ ಮೆನನ್ ರಾಜೇಂದ್ರನ್, ಪ್ರೀತಿ ಗೆಹ್ಲೋಟ್, ವಲಯ ಆಯುಕ್ತರಾದ ಸತೀಶ್, ರಮ್ಯಾ, ಕರೀಗೌಡ, ಸ್ನೇಹಲ್, ನವೀನ್ ಕುಮಾರ್ ರಾಜು, ದಿಗ್ವಿಜಯ್ ಬೋಡ್ಕೆ, ರಮೇಶ್, ಸುರಳ್ಕರ್ ವಿಕಾಸ್ ಕಿಶೋರ್, ಸಂಚಾರಿ ಪೊಲೀಸ್ ವಿಭಾಗದ ಜಂಟಿ ಪೊಲೀಸ್ ಆಯುಕ್ತರಾದ ಅನುಚೇತ್, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ ಎಂ. ನಂಜುಂಡಸ್ವಾಮಿ, ಉಪ ಮಹಾನಿರ್ದೇಶಕ ರವಿ ಡಿ. ಚನ್ನಣ್ಣನವರ್, ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಪ್ರಹ್ಲಾದ್, ವಲಯ ಮುಖ್ಯ ಅಭಿಯಂತರರು, ಮೆಟ್ರೋ, ಬೆಸ್ಕಾಂ, ಜಲಮಂಡಳಿ, ಎಸ್.ಡಿ.ಆರ್.ಎಫ್, ಅಗ್ನಿಶಾಮಕ ಮತ್ತು ಇತರೆ ಅಧಿಕಾರಿಗಳು ಇದ್ದರು.

ಅಧಿಕಾರಿಗಳ ವ್ಯಾಟ್ಸಪ್ ಗ್ರೂಪ್ ರಚಿಸಿ

ಬಿಬಿಎಂಪಿಯಲ್ಲಿ 8 ವಲಯಗಳು ಹಾಗೂ ಪಾಲಿಕೆ ಕೇಂದ್ರ ಕಚೇರಿ ಸೇರಿದಂತೆ 9 ಶಾಶ್ವತ ನಿಯಂತ್ರಣ ಕೊಠಡಿಗಳು ಹಾಗೂ 63 ಉಪ ವಿಭಾಗಗಳ ನಿಯಂತ್ರಣ ಕೊಠಡಿಗಳು ಸ್ಥಾಪಿಸಲಾಗಲಿದ್ದು, ಎಲ್ಲಾ ನಿಯಂತ್ರಣ ಕೊಠಡಿಗಳಿಗೆ ಪಾಲಿಕೆ, ಬೆಸ್ಕಾಂ, ಜಲಮಂಡಳಿ ಅಧಿಕಾರಿಗಳನ್ನು ಕೂಡಲೇ ನಿಯೋಜಿಸಬೇಕು. ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ವ್ಯಾಟ್ಸ್ ಆಪ್ ಗ್ರೂಪ್ ಗಳನ್ನು ರಚಿಸಿ ಅದರ ಮೂಲಕ ಸಮನ್ವಯ ಮಾಡಿಕೊಂಡು ಮಳೆಯಿಂದಾಗುವ ಸಮಸ್ಯೆಗಳಿಗೆ ತ್ವರಿತಗತಿಯಲ್ಲಿ ಸ್ಪಂದಿಸಿ ಸಮಸ್ಯೆ ಬಗೆಹರಿಸಬೇಕು ಎಂದು ತುಷಾರ್ ಗಿರಿನಾಥ್ ಸೂಚನೆ ನೀಡಿದರು. ನಗರದಲ್ಲಿ ಸಂಚಾರಿ ಪೊಲೀಸ್ ಅಧಿಕಾರಿಗಳು 647 ರಸ್ತೆ ಗುಂಡಿಗಳನ್ನು ಮುಚ್ಚಲು ಪಟ್ಟಿ ನೀಡಿದ್ದು, ಈಗಾಗಲೇ 323 ರಸ್ತೆ ಗುಂಡಿಗಳನ್ನು ಮುಚ್ಚಲಾಗಿರುತ್ತದೆ. 239 ರಸ್ತೆ ಗುಂಡಿಗಳು ಬಾಕಿಯಿದ್ದು, ಮುಚ್ಚಲಾ ಗುವುದು. ಇನ್ನು 90 ರಸ್ತೆ ಗುಂಡಿಗಳು ಬೇರೆ-ಬೇರೆ ಇಲಾಖೆಗಳಿಗೆ ಬರಲಿದ್ದು, 5 ರಸ್ತೆಗಳು ಬಿಬಿಎಂಪಿ ವ್ಯಾಪ್ತಿಗೆ ಬರುವುದಿಲ್ಲ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದರು.

ಹಣ ದುರುಪಯೋಗ ಸಾಬೀತು

ಬೆಂಗಳೂರು: ಮಹದೇವಪ್ಪ ರಾಂಪುರೆ ವೈದ್ಯಕೀಯ ಕಾಲೇಜು ವಿದ್ಯಾರ್ಥಿಗಳ ಸ್ಟೈಫಂಡ್ ಹಗರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳ ದಾಳಿ ವೇಳೆ 81.21 ಕೋಟಿ ರು. ದುರುಪಯೋಗ ಪಡಿಸಿಕೊಂಡಿದ್ದು ಸಾಬೀತಾಗಿದೆ.

ಬಿಲ್ಗುಂಡಿ, ಎಸ್ ಎಂ ಪಾಟೀಲ್, ಸುಭಾಷ್ ಜಗನ್ನಾಥ್ ಅವರು 282 ಪಿಜಿ ವಿದ್ಯಾರ್ಥಿಗಳ 81.21 ಕೋಟಿ ರು. ಹಣ ದುರುಪಯೋಗ ಪಡಿಸಕೊಂಡಿರುವುದು ಇಡಿ ತನಿಖೆ ವೇಳೆ ತಿಳಿದು ಬಂದಿದೆ. ಪ್ರಕರಣ ಸಂಬಂಧ ಇಡಿ ಅಧಿಕಾರಿಗಳು ಕಲಬುರಗಿಯ 7 ಕಡೆ ದಾಳಿ ನಡೆಸಿದ್ದರು. ಎಚ್‌ಕೆಇ ಮಾಜಿ ಅಧ್ಯಕ್ಷ ಭೀಮಾಶಂಕರ್ ಬಿಲ್ಗುಂಡಿ, ಎಮ್ ಆರ್‌ಎಮ್‌ಸಿ ವೈದ್ಯಕೀಯ ಕಾಲೇಜಿನ ಮಾಜಿ ಡೀನ್ ಎಸ್ ಎಂ ಪಟೇಲ್, ಲೆಕ್ಕಪರಿಶೋಧಕ ಸುಭಾಷ್ ಚಂದ್ರ ಕಚೇರಿಗಳ ಮೇಲೆ ಇಡಿ ದಾಳಿ ನಡೆಸಿ, ಪರಿಶೀಲನೆ ನಡೆಸಿದ್ದರು.

ಭೀಮಾಶಂಕರ್ ಬಿಲಗುಂದಿ ವಿರುದ್ಧ ಎಂಆರ್‌ಎಂಸಿ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳ ಸ್ಟೈಫಂಡ್ ಹಗರಣ ಆರೋಪ ಕೇಳಿಬಂದಿತ್ತು. 700 ಜನ ಎಂಬಿಬಿಎಸ್ ವಿದ್ಯಾರ್ಥಿ ಗಳಿಗೆ ಸುಮಾರು 80 ಕೋಟಿ ರು. ಅಧಿಕ ಹಣ ನೀಡದೆ ವಂಚನೆ ಮಾಡಿರುವ ಆರೋಪ ಇವರ ಮೇಲೆ ಕೇಳಿಬಂದಿತ್ತು.

ಪ್ರತೀಕಾರಕ್ಕಾಗಿ ಮಾವನನ್ನು ಕೊಂದ ಪುತ್ರ

ಬೆಂಗಳೂರು: ತಂದೆಯ ಕೊಲೆ ಪ್ರತೀಕಾರಕ್ಕಾಗಿ ಪುತ್ರ ತನ್ನ ಮಾವನನ್ನು ಮಾರಕಾಸ್ತ್ರಗಳಿಂದ ಕೊಚ್ಚಿ ಬರ್ಬರವಾಗಿ ಕೊಲೆ ಮಾಡಿರುವ ಘಟನೆ ರಾಮಮೂರ್ತಿನಗರ ಠಾಣಾ ವ್ಯಾಪ್ತಿಯ ಟಿನ್ ಫ್ಯಾಕ್ಟರಿ ಬಳಿ ನಡೆದಿದೆ. ಸಿರಾಜ್ (32) ಕೊಲೆಯಾದ ವ್ಯಕ್ತಿ. ಫಹಾದ್ ಕೊಲೆ ಮಾಡಿದ ಆರೋಪಿ. ಆರೋಪಿ ಫಹಾದ್ ಚಿಕ್ಕವನಿದ್ದಾಗ ಆತನ ಕಣ್ಣೆದುರೇ ತಂದೆ ಅನ್ಸರ್ ಪಾಷಾನನ್ನು ಸಿರಾಜ್ ಕೊಚ್ಚಿ ಕೊಂದಿದ್ದನು. ತನ್ನ ತಂದೆಯ ಸಾವಿಗೆ ಪ್ರತೀಕಾರಕ್ಕಾಗಿ 16 ವರ್ಷಗಳ ಕಾಲ ಕಾಯ್ದು ಮಾವ ಸಿರಾಜ್‌ನನ್ನು ಫಹಾದ್ ಕೊಲೆ ಮಾಡಿದ್ದಾನೆ.

ಜಗದೀಶ್ ಸಾವಿಗೆ ರಸ್ತೆ ರಂಪ ಕಾರಣ

ಬೆಂಗಳೂರು: ವಕೀಲ ಜಗದೀಶ್ ಸಾವನ್ನಪ್ಪಿದ್ದ ಪ್ರಕರಣ ಸಂಬಂಧ ಟ್ವಿಸ್ಟ್

ಸಿಕ್ಕಿದ್ದು, ಪೊಲೀಸರ ತನಿಖೆ ವೇಳೆ ರಹಸ್ಯ ಬಯಲಾಗಿದೆ. ಶನಿವಾರ ರಾತ್ರಿ ವಕೀಲ ಜಗದೀಶ್ ಅವರ ದೇಹ ರಕ್ತಸಿಕ್ತವಾಗಿ ನೈಸ್ ರಸ್ತೆಯಲ್ಲಿ ಪತ್ತೆಯಾಗಿತ್ತು. ಘಟನಾ ಸ್ಥಳಕ್ಕೆ ಕೆಂಗೇರಿ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದರು. ಘಟನೆ ಸಂಬಂಧ ಮೃತ ಜಗದೀಶ್ ಸೋದರ ಸಂಬಂಧಿಯೊಬ್ಬರು ಕೊಲೆ ಮಾಡಿರುವ ಬಗ್ಗೆ ಅನುಮಾನ ವ್ಯಕ್ತಪಡಿಸಿ ಕೆಂಗೇರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಪ್ರಕರಣ ದಾಖಲಿಸಿಕೊಂಡು ತನಿಖೆಗಿಳಿದ ಪೊಲೀಸರು ಸಾವಿನ ರಹಸ್ಯ ಬಯಲಿಗೆಳೆದಿದ್ದಾರೆ.

ಪ್ರಾಥಮಿಕ ತನಿಖೆ ಮಾಹಿತಿ ಪ್ರಕಾರ, ವಕೀಲ ಜಗದೀಶ್ ಸಾವಿಗೆ ರೋಡ್ ರೇಜ್ ಕಾರಣವಾಗಿರುವ ಬಗ್ಗೆ ಮಾಹಿತಿ ಲಭ್ಯವಾಗಿದೆ. ಮೇಲ್ನೋಟಕ್ಕೆ ಜಗದೀಶ್ ಅವರು ಅಪಘಾತದಲ್ಲಿ ಮೃತಪಟ್ಟಿದ್ದಾರೆ ಎಂದು ತಿಳಿದು ಬಂದಿದೆ. ವಕೀಲ್ ಜಗದೀಶ್ ನೈಸ್ ರಸ್ತೆಯಲ್ಲಿ ತೆರಳುತ್ತಿದ್ದಾಗ ಅವರ ಕಾರಿಗೆ ಲಾರಿಯೊಂದು ಟಚ್ ಆಗಿದೆ. ಟಚ್ ಆಗುತ್ತಿದ್ದಂತೆ ಚಾಲಕ ಸ್ವಲ್ಪ ಮುಂದೆ ಹೋಗಿ ಲಾರಿ ನಿಲ್ಲಿಸಿದ್ದ. ಆಗ ಜಗದೀಶ್ ಕಾರು ನಿಲ್ಲಿಸಿ ಲಾರಿ ಚಾಲಕನ ಬಳಿಗೆ ಹೋಗಿದ್ದಾರೆ. ಈ ವೇಳೆ ಅವರಿಬ್ಬರ ಮಧ್ಯೆ ವಾಗ್ವಾದ ನಡೆದಿದೆ. ವಾಗ್ವಾದದ ಬರದಲ್ಲಿ ಜಗದೀಶ್ ಅರಿವಿಲ್ಲದೇ ನಡುರಸ್ತೆಗೆ ಹೋಗಿದ್ದಾರೆ. ಇದೇ ಸಮಯದಲ್ಲಿ ವೇಗವಾಗಿ ಬರುತ್ತಿದ್ದ ಲಾರಿಯ ಹಿಂಬದಿಯ ಭಾಗ ಜಗದೀಶ್‌ಗೆ ಟಚ್ ಆಗಿದೆ. ಇದರಿಂದ ತಕ್ಷಣ ಕೆಳಗೆ ಬಿದ್ದು, ತೀವ್ರ ರಕ್ತಸ್ರಾವವಾಗಿ ಸಾವನ್ನಪ್ಪಿದ್ದಾರೆ.

ಲೌಡ್ ಸ್ಪೀಕರ್‌ಗೆ ಒತ್ತಾಯಿಸಿದ್ದಕ್ಕೆ ಕೊಲೆ

ಬೆಂಗಳೂರು: ಫೋನ್ ಸ್ಪೀಕರ್ ಆನ್ ಮಾಡಲು ಒತ್ತಾಯಿಸಿದ್ದಕ್ಕೆ ಗಲಾಟೆ ನಡೆದು ಪತ್ನಿಯ ಕತ್ತು ಹಿಸುಕಿ ಕೊಂದ ಆರೋಪಿಯನ್ನು ಬಸವೇಶ್ವರ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಪತ್ನಿ ನಮಿತಾ ಸಾಹು (43) ಕೊಲೆಯಾದವರು. ಲೋಕೇಶ್ ಕುಮಾರ್ ಗೆಹ್ಲೋಟ್ ಎಂಬಾತ ಬಂಧಿತ ಕೊಲೆ ಆರೋಪಿ. ಮನೆ ಮಾಲೀಕ ನೀಡಿದ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಐದು ವರ್ಷಗಳ ಹಿಂದೆ ಮ್ಯಾಟ್ರಿಮೋನಿ ಮೂಲಕ ಪರಿಚಯವಾದ ನಮಿತಾ ಸಾಹು ಜತೆ ಮದುವೆಯಾಗಿ ಮಹಾ ಗಣಪತಿ ನಗರದ ಬಾಡಿಗೆ ಮನೆಯೊಂದರಲ್ಲಿ ವಾಸವಿದ್ದ. ಇತ್ತೀಚೆಗೆ ದಂಪತಿ ನಡುವೆ ಸಣ್ಣಪುಟ್ಟ ವಿಚಾರಗಳಿಗೆ ಗಲಾಟೆ ಯಾಗುತ್ತಿತ್ತು. ಏಪ್ರಿಲ್ 24ರಂದು ಮನೆಯಲ್ಲಿದ್ದ ಲೋಕೇಶ್ ಕುಮಾರ್‌ಗೆ ಪತ್ನಿ ನಮಿತಾ ಸಾಹು ಸಹೋದರ ಕರೆ ಮಾಡಿ ದ್ದರು. ಈ ವೇಳೆ ಫೋನ್ ಸ್ಪೀಕರ್ ಆನ್ ಮಾಡುವಂತೆ ನಮಿತಾ ಒತ್ತಾಯಿ ಸಿದ್ದರು. ಆದರೆ ಲೋಕೇಶ್ ಕುಮಾರ್ ಫೋನ್ ಸ್ಪೀಕರ್ ಆನ್ ಮಾಡಲು ನಿರಾಕರಿಸಿದಾಗ ಇಬ್ಬರ ನಡುವೆ ಗಲಾಟೆಯಾಗಿತ್ತು. ಈ ಸಂದರ್ಭದಲ್ಲಿ ಮಾತಿಗೆ ಮಾತು ಬೆಳೆದು ನಮಿತಾ ಸಾಹು ಅವರ ಕತ್ತು ಹಿಸುಕಿ ಲೋಕೇಶ್ ಕುಮಾರ್ ಹತ್ಯೆ ಮಾಡಿದ್ದಾನೆ ಎಂದು ತನಿಖೆಯಲ್ಲಿ ತಿಳಿದು ಬಂದಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.

ಸಿಬಿಐ ಪ್ರಕರಣಗಳ ನ್ಯಾಯಾಧೀಶರೂ ಸೇರಿ ಸಾರ್ವಜನಿಕ ಹಿತಾಸಕ್ತಿ ಮತ್ತು ಆಡಳಿತಾತ್ಮಕ ಕಾರಣಗಳಿಗಾಗಿ ವರ್ಗ

ಜಿಲ್ಲಾ ನ್ಯಾಯಾಂಗದ 452 ನ್ಯಾಯಾಧೀಶರ ವರ್ಗಾವಣೆ

ಬೆಂಗಳೂರು: ಸಾರ್ವಜನಿಕ ಹಿತಾಸಕ್ತಿ ಮತ್ತು ಆಡಳಿತಾತ್ಮಕ ಕಾರಣಗಳಿಗಾಗಿ ಜಿಲ್ಲಾ ನ್ಯಾಯಾಂಗದ 452 ನ್ಯಾಯಾಧೀಶರನ್ನು ಕರ್ನಾಟಕ ಹೈಕೋರ್ಟ್ ರಾಜ್ಯದ ವಿವಿಧೆಡೆಗೆ ವರ್ಗಾಯಿಸಿದ್ದು, ಜೂನ್ 2ಕ್ಕೆ ವರ್ಗಾವಣೆ ಅನ್ವಯಿಸಲಿದೆ.

ವರ್ಗಾವಣೆಗೊಂಡಿರುವವರ ಪೈಕಿ 119 ಮಂದಿ ಜಿಲ್ಲಾ ನ್ಯಾಯಾಧೀಶರು, ನಾಲ್ವರು ತಾತ್ಕಾಲಿಕ ಜಿಲ್ಲಾ ನ್ಯಾಯಾಧೀಶರು, 113 ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು 216 ಸಿವಿಲ್ ನ್ಯಾಯಾಧೀಶರು ಸೇರಿದ್ದಾರೆ.

ವರ್ಗಾವಣೆಯಾದವರಲ್ಲಿ ಎನ್‌ಐಎ ನ್ಯಾಯಾಲಯದ ನ್ಯಾಯಾಧೀಶರಾದ ಸಿ. ಎಂ.ಗಂಗಾಧರ್ ಮತ್ತು ಸಿಬಿಐ ಪ್ರಕರಣಗಳ ವಿಚಾರಣೆಗೆ ನೇಮಕವಾಗಿರುವ ವಿಶೇಷ ನ್ಯಾಯಾ ಧೀಶ ಎಚ್.ಎ. ಮೋಹನ್ ಅವರು ಸೇರಿದ್ದಾರೆ. ನ್ಯಾ. ಗಂಗಾಧರ್ ಅವರ ಹುದ್ದೆಗೆ 55ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶ ಕೆಂಪರಾಜು ಅವರನ್ನು ವರ್ಗಾಯಿಸಲಾಗಿದೆ. ಗಂಗಾಧರ್ ಅವರನ್ನು ಗದಗದ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾಗಿ ವರ್ಗಾಯಿಸಲಾಗಿದೆ.

32ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಸಿಬಿಐ ಪ್ರಕರಣಗಳ ವಿಚಾರಣೆಗೆ ನೇಮಕವಾಗಿದ್ದ ವಿಶೇಷ ನ್ಯಾಯಾಧೀಶ ಎಚ್.ಎ.ಮೋಹನ್ ಅವರನ್ನು ವಿಜಯಪುರದ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರನ್ನಾಗಿ ವರ್ಗಾಯಿಸಲಾಗಿದೆ. ಆ ಹುದ್ದೆಗೆ ಮೈಸೂರಿನ ಕೈಗಾರಿಕಾ ನ್ಯಾಯಾಧಿಕರಣದ ಮೇಲ್ವಿಚಾರಣಾ ಅಧಿಕಾರಿ ರುಡಾಲ್ಫ್ ಪೆರೇರಾ ಅವರನ್ನು ವರ್ಗಾಯಿಸಲಾಗಿದೆ. ಉಳಿದಂತೆ ಚಾಮರಾಜನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಬಿ.ಎಸ್ .ಭಾರತಿ ಅವರನ್ನು ಧಾರವಾಡಕ್ಕೆ ಅದೇ ಹುದ್ದೆಗೆ, ಬೆಂಗಳೂರಿನ ಸ್ಮಾಲ್ ಕಾಸ್‌ನ ಪ್ರಧಾನ ನ್ಯಾಯಾಧೀಶ ಜೆ.ಎನ್.ಸುಬ್ರಮಣ್ಯ ಅವರನ್ನು ಮಂಡ್ಯದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಹುದ್ದೆಗೆ ವರ್ಗಾಯಿಸಲಾಗಿದೆ.

ಗದಗದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ಅವರನ್ನು ಮಂಗಳೂರಿನ ಅದೇ ಹುದ್ದೆಗೆ, ಯಾದಗಿರಿಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಬಿ.ಎಸ್. ರೇಖಾರನ್ನು ಬೆಂಗಳೂರಿನ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶೆ ಹುದ್ದೆಗೆ, ಮಂಡ್ಯದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಂ.ಭ್ಯಂಗೇಶ್ ಅವರನ್ನು ಬೆಂಗಳೂರು ನಗರದ ಸ್ಮಾಲ್ ಕಾಸಸ್ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರ ಹುದ್ದೆಗೆ ಶಿವಮೊಗ್ಗದ 5ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಜಿ ಪ್ರಭಾವತಿ ಅವರನ್ನು ಚಾಮರಾಜನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಹುದ್ದೆಗೆ ವರ್ಗಾವಣೆ ಮಾಡಲಾಗಿದೆ.

ಗದಗದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆಯನ್ನಾಗಿ ಚಿಕ್ಕಬಳ್ಳಾಪುರದ 2ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ನಾಗವೇಣಿ ಅವರನ್ನು, ಯಾದಗಿರಿಯ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಹುದ್ದೆಗೆ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಚ್ ಜೆ ಮರುಳಸಿದ್ದಾರಾಧ್ಯ ಅವರನ್ನು ವಿಜಯಪುರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಹುದ್ದೆಗೆ ಬೆಂಗಳೂರು ನಗರದ 27ನೇ ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸತ್ರ ನ್ಯಾಯಾಧೀಶ ಎ ಹರೀಶ ಅವರನ್ನು ವರ್ಗಾಯಿಸಲಾಗಿದೆ.

ಸೇವಾ ನಿವೃತ್ತಿ

ಇನ್ನು ಈ ಹಿಂದೆ ಎನ್‌ಐಎ ವಿಶೇಷ ನ್ಯಾಯಾಲಯ ಹಾಗೂ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿಗಳ ಆಪ್ತ ಕಾರ್ಯದರ್ಶಿಯಾಗಿದ್ದ, ವಿಜಯಪುರ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಾ. ಕಸನಪ್ಪ ನಾಯ್ಕ್, ಧಾರವಾಡ ಹಾಗೂ ಮಂಗಳೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಿ ಜಿ ರಮಾ ಹಾಗೂ ರವೀಂದ್ರ ಎಂ. ಜೋಶಿ ಅವರು ಮೇ 31ರಂದು ಸೇವಾ ನಿವೃತ್ತಿ ಹೊಂದಲಿದ್ದಾರೆ ಎಂದು ಹೈಕೋರ್ಟ್ ರಿಜಿಸ್ಟ್ರಾರ್ ಜನರಲ್ ಕೆ. ಎಸ್.ಭರತ್ ಕುಮಾರ್ ಹೊರಡಿಸಿರುವ ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

- ವರ್ಗಾವಣೆಗೊಂಡಿರುವವರ ಪೈಕಿ 119 ಮಂದಿ ಜಿಲ್ಲಾ ನ್ಯಾಯಾಧೀಶರು, ನಾಲ್ವರು ತಾತ್ಕಾಲಿಕ ಜಿಲ್ಲಾ ನ್ಯಾಯಾಧೀಶರು, 113 ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು 216 ಸಿವಿಲ್ ನ್ಯಾಯಾಧೀಶರು ಸೇರಿದ್ದಾರೆ.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಶ್ರೀ. **ಲೋಕೇಶ್.ಇ**, ಇವರು ಕೆಳಗೆ ಷೆಡ್ಯೂಲ್‌ನಲ್ಲಿ ತಿಳಿಸಿರುವ ಸ್ಥಿರಾಸ್ತಿ ಸ್ವತ್ತಿಗೆ ಮಾಲೀಕರಾಗಿರುತ್ತಾರೆ ಮತ್ತು **ಶ್ರೀಮತಿ ಆರ್. ಮಂಗಳ ಗೌರಿ ರವರು ಶ್ರೀಮತಿ ಸುಜಾತರವರ ಹೆಸರಿಗೆ ಬರೆದುಕೊಟ್ಟಿರುವ ಕ್ರಯ ಪತ್ರದ ದಿನಾಂಕ : 18-01-2018, ದಸ್ತಾವೇಜು ನಂ. 8538/ 2017-18, ಪುಸ್ತಕ -1, ಸಿ.ಡಿ. ನಂ.325, ಬೆಂಗಳೂರು, ನಾಗರಬಾವಿ, ಉಪನೋಂದಣಿ ಕಚೇರಿಯಲ್ಲಿ ನೋಂದಣಿಯಾಗಿರುವ** ಕ್ರಯಪತ್ರವನ್ನು ಕಳೆದುಕೊಂಡಿರುತ್ತಾರೆ. ಈ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾರಾದರೂ ಸ್ವತ್ತಿನ ಮೇಲೆ ಸ್ವಾಧೀನವನ್ನು ಹೊಂದಿದ್ದರೆ, ಅದನ್ನು ಈ ದಿನಾಂಕದಿಂದ ನೋಟೀಸು ಪ್ರಕಟವಾದ ಏಳು ದಿನಗಳ ಒಳಗಾಗಿ ಕೆಳಸಹಿದಾರರಿಗೆ ತಲುಪಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಷೆಡ್ಯೂಲ್ ಸ್ವತ್ತು

ಬೆಂಗಳೂರು ಉತ್ತರ ತಾಲ್ಲೂಕಿನ ಯಶವಂತಪುರ ಹೋಬಳಿ ಶ್ರೀಗಂಧದಕಾವಲು ಗ್ರಾಮದಲ್ಲಿರುವ ವಸತಿ ಸ್ವತ್ತಿನ ಸೈಟ್ ನಂ.12, ಖಾತಾ ಸಂಖ್ಯೆ 252, ಹಳೆಯ ಅಸೆಸ್ಮೆಂಟ್ ಸಂಖ್ಯೆ 79, ಹೊಸ ಸಂಖ್ಯೆ 79/1, ಸ್ವತ್ತು ಸಂಖ್ಯೆ 79,ರ ವಿಸ್ತೀರ್ಣ ಪೂರ್ವದಿಂದ ಪಶ್ಚಿಮಕ್ಕೆ ಅಳತೆ: 30 ಅಡಿ, ಮತ್ತು ಉತ್ತರದಿಂದ ದಕ್ಷಿಣಕ್ಕೆ ಅಳತೆ: 35 ಅಡಿ, ಒಟ್ಟು 1050 ಚದರ ಅಡಿ ಮತ್ತು ಈ ಸ್ವತ್ತಿಗೆ ಚಕ್ಕುಬಂಧಿ ಪೂರ್ವಕ್ಕೆ: ಸೈಟ್ ಸಂಖ್ಯೆ 13, ಪಶ್ಚಿಮಕ್ಕೆ: ಸೈಟ್ ಸಂಖ್ಯೆ 11, ಉತ್ತರಕ್ಕೆ: ಸೈಟ್ ಸಂಖ್ಯೆ .15, ದಕ್ಷಿಣಕ್ಕೆ: 25 ಅಡಿ ರಸ್ತೆ,

ಎನ್ ಜಗದೀಶ್ ಕುಮಾರ್, ವಕೀಲರು
ನಂ.30/1, 2ನೇ ಮಹಡಿ, 7ನೇ ಕ್ರಾಸ್,
ಎನ್.ಆರ್.ಕಾಲೋನಿ ಬಸ್ ನಿಲ್ದಾಣದ ಹತ್ತಿರ,
ಹೋಟೆಲ್ ದ್ವಾರಕ ಎದುರು, ಬೆಂಗಳೂರು-560019.

PUBLIC NOTICE

This is to inform the general public that my client **Palaparthi Divya** intends to purchase the immovable property described in the schedule hereunder from its owner **Sri. Ashwathappa.M,** S/o Late Munimallappa, aged about 44 years, residing at No.18/116, 1st Cross, behind Madhura Garments, Parappana Agrahara, Electronic City Post, Bangalore-560 100. Any person/s having any claims/right/interest in respect of the schedule property may file their objections with the undersigned with documentary evidence ***within Fifteen days*** from the date of publication of this notice. If no claims are received within the stipulated period it shall be presumed that there is no claim in respect of the schedule property and my client will be proceeding to purchase the same.

SCHEDULE

All that piece and parcel of property bearing Site No.18, New EPID No.6644455332 formed in property No.48/1, Katha No.48/1, **situated at Naganathapura Village, Begur Hobli, Bangalore South Taluk,** presently comes under BBMP limits Ward No.191, Singasandra, measuring **East to West 40 feet** and **North to South 40 feet, totally measuring 1600 sq.ft** bounded on the:
East by: Site No.19; **West by:** Road;
North by: Road; **South by:** Site No.17.
Along with construction consisting of Vitrified tile flooring, hardwood doors and windows having: Stilt Floor: Parking, Ground Floor: Measuring 1500 Sq.ft, First Floor: Measuring 1500 Sq.ft, Second Floor: Measuring 1500 Sq.ft, Third Floor: Measuring 1500 Sq.ft.

Sd/-
Syed Juned Ahmed, Advocate
No.20/1, 5th Floor,"Aashirwad Building,
9th Main, 3rd Block, Jayanagar,
Bangalore-560 011.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಶ್ರೀ. ಪರಸ್ಮಲ್ ಇವರು ಕೆಳಗೆ ಷೆಡ್ಯೂಲ್‌ನಲ್ಲಿ ತಿಳಿಸಿರುವ ಸ್ಥಿರಾಸ್ತಿ ಸ್ವತ್ತಿಗೆ ಮಾಲೀಕರಾಗಿರುತ್ತಾರೆ ಮತ್ತು **ಶ್ರೀ. ನಯಾಜ್ ಖಾನ್ ಮತ್ತು ಇವರ ಪತ್ನಿ ಶ್ರೀಮತಿ. ಫರ್ಜನ್ ಬೇಗಂ ಇವರ ನಡುವಿನ ವಿಭಾಗ ಪತ್ರದ ದಿನಾಂಕ : 14-05-2015, ದಸ್ತಾವೇಜು ನಂ. 1272/ 2015-16, ಪುಸ್ತಕ -1, ಸಿ.ಡಿ. ನಂ.246, ರಾಮನಗರ, ಉಪನೋಂದಣಿ ಕಚೇರಿಯಲ್ಲಿ ನೋಂದಣಿಯಾಗಿರುವ** ವಿಭಾಗ ' ಪತ್ರವನ್ನು ಕಳೆದುಕೊಂಡಿರುತ್ತಾರೆ. ಈ ಷೆಡ್ಯೂಲ್ ಸ್ವತ್ತಿಗೆ ಸಂಬಂಧಿಸಿದಂತೆ ಯಾರಾದರೂ ಸ್ವತ್ತಿನ ಮೇಲೆ ಸ್ವಾಧೀನವನ್ನು ಹೊಂದಿದ್ದರೆ, ಅದನ್ನು ಈ ದಿನಾಂಕದಿಂದ ನೋಟೀಸು ಪ್ರಕಟವಾದ ಏಳು ದಿನಗಳ ಒಳಗಾಗಿ ಕೆಳಸಹಿದಾರರಿಗೆ ತಲುಪಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

ಷೆಡ್ಯೂಲ್ ಸ್ವತ್ತು

ಐಟಂ ನಂ.1: ರಾಮನಗರ ತಾಲ್ಲೂಕು ಮತ್ತು ರಾಮನಗರ ಜಿಲ್ಲೆಯ ಬಿಡದಿ ಹೋಬಳಿಯ ಕೇತಿಗಾನಹಳ್ಳಿ ಗ್ರಾಮದಲ್ಲಿರುವ ಸ್ವತ್ತಿನ ಬಿಯರಿಂಗ್ ನಂ. 1049/11, ಜಂಜಾರು ಸಂಖ್ಯೆ 328, ವೈಡ್ ಇ-ಖಾತಾ ಸಂಖ್ಯೆ 150200103200120321, ಸರ್ವೆ ನಂ.29/5ಬಿ ರಲ್ಲಿ ವಿಂಗಡಿಸಿರುವ ಸ್ವತ್ತು ಸಂಖ್ಯೆ 328/1049/11, ರಲ್ಲಿ ರಚಿಸಲಾಗಿದೆ, ಮತ್ತು ಕೃಷಿ ಭೂಮಿಯಿಂದ ವಸತಿ ಉದ್ದೇಶಕ್ಕಾಗಿ ಪರಿವರ್ತಿತ ಖಾಲಿ ಸ್ವತ್ತಿನ ಸಂಖ್ಯೆ 2904734202, ಹಳೆಯ ಖಾತಾ ಸಂಖ್ಯೆ 242/248/3, ಹೊಸ ಖಾತಾ ಸಂಖ್ಯೆ 259/242/248/3/ಎ,ರ ವಿಸ್ತೀರ್ಣ ಪೂರ್ವದಿಂದ ಪಶ್ಚಿಮಕ್ಕೆ 9.75 ಮೀಟರ್ ಮತ್ತು ಉತ್ತರದಿಂದ ದಕ್ಷಿಣಕ್ಕೆ 3.048 ಮೀಟರ್ ಅಳತೆ ಹೊಂದಿದೆ, ಒಟ್ಟು 29.71 ಚದರ ಅಡಿ ಅಳತೆ ಹೊಂದಿರುವ ಈ ಸ್ವತ್ತಿಗೆ ಚಕ್ಕುಬಂದಿ:- **ಪೂರ್ವಕ್ಕೆ:** ಶ್ರೀ. ಇಂತಿಯಾಜ್ ಖಾನ್ ಅವರಿಗೆ ಸೇರಿದ ಸ್ವತ್ತು, **ಪಶ್ಚಿಮಕ್ಕೆ:** ಪರಸ್ಮಲ್ ಅವರಿಗೆ ಸೇರಿದ ಸ್ವತ್ತು, **ಉತ್ತರಕ್ಕೆ:** 4.5 ಅಡಿ ಪ್ಯಾಸೇಜ್, **ದಕ್ಷಿಣಕ್ಕೆ:** ಅನ್ವರ್ ಖಾನ್ ಅವರಿಗೆ ಸೇರಿದ ಸ್ವತ್ತು,

ಐಟಂ ನಂ.2: ರಾಮನಗರ ತಾಲ್ಲೂಕು ಮತ್ತು ರಾಮನಗರ ಜಿಲ್ಲೆಯ ಬಿಡದಿ ಹೋಬಳಿಯ ಕೇತಿಗಾನಹಳ್ಳಿ ಗ್ರಾಮದಲ್ಲಿರುವ ವಸತಿ ಸ್ವತ್ತಿನ ಖಾಲಿ ಪುರಸಭೆಯ ಹೊಸ ಖಾತಾ ಸಂಖ್ಯೆ.1/242/248/3, ಹಳೆಯ ಖಾತಾ ಸಂಖ್ಯೆ. 242/248/3, ರ ವಿಸ್ತೀರ್ಣ ಪೂರ್ವದಿಂದ ಪಶ್ಚಿಮಕ್ಕೆ 28 ಅಡಿ ಮತ್ತು ಉತ್ತರದಿಂದ ದಕ್ಷಿಣಕ್ಕೆ 11 ಅಡಿ ಅಳತೆಯನ್ನು ಹೊಂದಿದೆ, ಒಟ್ಟು 308 ಚದರ ಅಡಿ ಅಳತೆಯ ಈ ಸ್ವತ್ತಿಗೆ ಚಕ್ಕುಬಂದಿ:- **ಪೂರ್ವಕ್ಕೆ:** ಶ್ರೀ. ಇಂಥಿಯಾಜ್ ಖಾನ್ ಅವರಿಗೆ ಸೇರಿದ ಸ್ವತ್ತು, **ಪಶ್ಚಿಮಕ್ಕೆ:** ಕೇತಿಗಾನಹಳ್ಳಿ ರಸ್ತೆ, **ಉತ್ತರಕ್ಕೆ:** 4.5 ಅಡಿ ಪ್ಯಾಸೇಜ್, **ದಕ್ಷಿಣಕ್ಕೆ:** ಅನ್ವರ್ ಖಾನ್ ಅವರಿಗೆ ಸೇರಿದ ಸ್ವತ್ತು,

ಎನ್ ಜಗದೀಶ್ ಕುಮಾರ್, ವಕೀಲರು
ನಂ.30/1, 2ನೇ ಮಹಡಿ, 7ನೇ ಕ್ರಾಸ್,
ಎನ್.ಆರ್.ಕಾಲೋನಿ ಬಸ್ ನಿಲ್ದಾಣದ ಹತ್ತಿರ,
ಹೋಟೆಲ್ ದ್ವಾರಕ ಎದುರು, ಬೆಂಗಳೂರು-560019.

ಆಲಮಟ್ಟಿ ಎತ್ತರ ಹೆಚ್ಚಿಸಲು ಸರಕಾರ ಬದ್ಧ: ಡಿಕೆಶಿ

ಬೇರೆಯವರ ಲಾಭ-ನಷ್ಟಕ್ಕಿಂತ, ನಮ್ಮ ನೀರು ಬೇಕು ಎನ್ನುವುದು ನಮ್ಮ ವಾದ | ರಕ್ಷಣಾ ಇಲಾಖೆಯಿಂದ ಟನೆಲ್ ಹಾಗೂ ಮೆಟ್ರೋ ಜಾಗ ಪಡೆಯುತ್ತೇವೆ | ತಮ್ಮ ಸಮುದಾಯ ತಿಳಿಸಲು ಮುಕ್ತ ಅವಕಾಶ ನೀಡಿದ್ದೇವೆ

ಬೆಂಗಳೂರು: ಕರ್ನಾಟಕ ತನ್ನ ಪಾಲಿನ ನೀರನ್ನು ಬಳಸಿಕೊಳ್ಳಲು ಬದ್ಧವಾಗಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರಕಾರ ಗೆಜೆಟ್ ಅಧಿಸೂಚನೆಗೆ ಸಂಬಂಧಿಸಿದ ಸಭೆಯಲ್ಲಿ ವಿಚಾರ ಮಂಡಿಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಲಮಟ್ಟಿ ಅಣೆಕಟ್ಟು ಎತ್ತರವನ್ನು 524 ಮೀಟರ್‌ಗೆ ಹೆಚ್ಚಿಸಿ, ನಮ್ಮ ಪಾಲಿನ ನೀರು ಬಳಸಿಕೊಳ್ಳಲು ರಾಜ್ಯ ಸರಕಾರ ಬದ್ಧವಾಗಿದೆ.

2010ರಲ್ಲಿ ಕೃಷ್ಣಾ ಜಲ ನ್ಯಾಯಾಧಿಕರಣ ತೀರ್ಪಿನ ಅನ್ವಯ ಕೇಂದ್ರ ಸರಕಾರ ಗೆಜೆಟ್ ಅಧಿಸೂಚನೆ ಹೊರಡಿಸಬೇಕಾಗಿದೆ. ಈ ಸಂಬಂಧ ಮೇ 7ರಂದು ಕೇಂದ್ರ ಜಲಶಕ್ತಿ ಸಚಿವಾಲಯವು ನಾಲ್ಕು ರಾಜ್ಯ ಸರಕಾರದ ಪ್ರತಿನಿಧಿಗಳ ಸಭೆ ಕರೆದಿದೆ. ಈ ವಿಚಾರವಾಗಿ ಸಂಬಂಧಪಟ್ಟ ಸಚಿವರನ್ನು ಕರೆಸಿ ಸಭೆ ಮಾಡಿ ಅಭಿಪ್ರಾಯ ಸಂಗ್ರಹಿಸಲಾಗಿದೆ. ಈ ವಿಚಾರವಾಗಿ ಕಾನೂನು ತಜ್ಞರ ಜತೆ ಚರ್ಚೆ ಮಾಡಿದ್ದು, 2 ದಿನಗಳಲ್ಲಿ ಅವರು ತಮ್ಮ ಅಭಿಪ್ರಾಯ ನೀಡಲಿದ್ದಾರೆ. ಇವುಗಳ ಆಧಾರದ ಮೇಲೆ ಕೇಂದ್ರ ಸಚಿವಾಲಯದ ಸಭೆಯಲ್ಲಿ ನಾವು ನಮ್ಮ ಬೇಡಿಕೆ ಪ್ರಸ್ತಾಪಿಸುತ್ತೇವೆ ಎಂದು ತಿಳಿಸಿದರು.ಈ ಯೋಜನೆ ಜಾರಿಗೆ ಸರಕಾರ ಈಗಾಗಲೇ ಭೂಸ್ವಾಧೀನ ಪ್ರಕ್ರಿಯೆ ಆರಂಭಿಸಿದ್ದು, ಇದಕ್ಕೆ ಅಗತ್ಯ ಹಣ ಮೀಸಲಿಡಲಾಗುವುದು ಎಂದರು. ಆಂಧ್ರ ಹಾಗೂ ತೆಲಂಗಾಣಕ್ಕೆ

13 ಟಿಎಂಸಿ ನೀರು ಲಾಭವಾಗಲಿದೆ ಎಂದು ಕೇಳಿದಾಗ, ಅವರಿಗೆ ಎಷ್ಟಾದರೂ ಲಾಭ ಆಗಲಿ, ನಷ್ಟ ಆಗಲಿ. ನಾವು ಅಣೆಕಟ್ಟನ್ನು 524 ಮೀಟರ್‌ಗಳಿಗೆ ಎತ್ತರಿಸಬೇಕು. ಅದಕ್ಕೆ ಎಷ್ಟು ಬೇಕೋ ಅಷ್ಟು ಪ್ರಯತ್ನ ನಾವು ಮಾಡುತ್ತೇವೆ ಎಂದು ತಿಳಿಸಿದರು.

ಸಮುದಾಯ ತಿಳಿಸಲು ಮುಕ್ತ ಅವಕಾಶ ನೀಡಿದ್ದೇವೆ: ಒಳ ಮೀಸಲು ಸಮೀಕ್ಷೆಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿ, ಒಳ ಮೀಸಲಿಗೆ ಸಮೀಕ್ಷೆ ಮಾಡಲು ಸಚಿವ ಸಂಪುಟ ತೀರ್ಮಾನ ಮಾಡಿದೆ. ಇದಕ್ಕಾಗಿ ಸಮಿತಿ ಮಾಡಿದ್ದು, ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಯಾವುದೇ ಗೊಂದಲ ಇಲ್ಲದಂತೆ ಜನರು ತಮ್ಮ ಜಾತಿಗಳನ್ನು ಸ್ಪಷ್ಟವಾಗಿ ಮಾಹಿತಿ ನೀಡಬೇಕು ಎಂದು ಮುಕ್ತ ಅವಕಾಶ ಮಾಡಿಕೊಡಲಾಗಿದೆ. ಒಳ ಮೀಸಲು ವಿಷಯದಲ್ಲಿ ಯಾವುದೇ ಗೊಂದಲವಿಲ್ಲ. ಈ ವಿಷಯದಲ್ಲಿ ಸುಪ್ರೀಂ ಕೋರ್ಟ್ ತೀರ್ಪು ನೀಡಿದೆ. ನಮ್ಮ ಪಕ್ಷ ಪ್ರಣಾಳಿಕೆಯಲ್ಲಿ ಮಾತು ಕೊಟ್ಟಿದೆ. ಈ ಸಮುದಾಯಗಳಲ್ಲಿ ಕೆಲವು ಪಂಗಡಗಳು ಸರಿಯಾಗಿ ಮಾಹಿತಿ ನೀಡಿಲ್ಲ, ನಮ್ಮ ಸಂಖ್ಯೆ ಹೆಚ್ಚಿದೆ, ನಗರ ಪ್ರದೇಶದಲ್ಲಿ ಇರುವವರು ತಮ್ಮ ಸಮುದಾಯವನ್ನು ಬಹಿರಂಗಪಡಿಸಿಲ್ಲ. ಹೀಗಾಗಿ ಅವರಿಗೆ ಮುಕ್ತ ಅವಕಾಶ ಕಲ್ಪಿಸಿಕೊಡಲಾಗುತ್ತಿದೆ ಎಂದು ಹೇಳಿದರು.

ಅಗತ್ಯವಿರುವ ಜಾಗ ಪಡೆಯುತ್ತೇವೆ

ಟನಲ್ ರಸ್ತೆ ನಿರ್ಮಾಣ ಹಾಗೂ ಮೆಟ್ರೋ ಕಾಮಗಾರಿಗೆ ಹೆಬ್ಬಾಳ ಬಳಿಯ ಜಾಗದ ವಿಚಾರವಾಗಿ ನಡೆದ ಸಭೆಯ ಬಗ್ಗೆ ಕೇಳಿದಾಗ, ಹೆಬ್ಬಾಳ ಜಂಕ್ಷನ್ ಬಹಳ ಮುಖ್ಯವಾದ ಜಾಗ. ಇಲ್ಲಿ ಮೆಟ್ರೋ ಹಾಗೂ ಟನಲ್ ರಸ್ತೆ ಅವಶ್ಯವಿದೆ. ಹೀಗಾಗಿ ನಾವು ಅಗತ್ಯವಿರುವ ಜಾಗವನ್ನು ತೆಗೆದುಕೊಳ್ಳುತ್ತೇವೆ. ಯಾವುದೇ ಕಾರಣಕ್ಕೂ ನಾವು ಯೋಜನೆ ಹಿಂಪಡೆಯಲು ಸಾಧ್ಯವಿಲ್ಲ. ಮೆಟ್ರೋ ಹಾಗೂ ಟನೆಲ್ ರಸ್ತೆ ಅಧಿಕಾರಿಗಳು ಸೇರಿ ಇದರ ವಿನ್ಯಾಸ ಸಿದ್ಧಪಡಿಸುವಂತೆ ಸೂಚಿಸಿದ್ದೇವೆ. ಇದಕ್ಕೆ ಅಗತ್ಯವಿರುವ ಮಿಲಿಟರಿ ಜಾಗ ಹಾಗೂ ಖಾಸಗಿ ಜಾಗ ಎಷ್ಟು ಬೇಕು ಎಂದು ನಾವು ಚರ್ಚೆ ಮಾಡಿದ್ದೇವೆ. ಟಿಡಿಆರ್ ಅಥವಾ ಎಫ್‌ಎಆರ್ ಮೂಲಕ ಪರಿಹಾರ ನೀಡಲು ನಾವು ಬದ್ಧವಾಗಿದ್ದೇವೆ. ನಾವು ಈ ಜಾಗ ಬಿಟ್ಟು ಕೊಡಲು ಸಿದ್ಧವಿಲ್ಲ. ಟನಲ್ ನಿರ್ಮಾಣಕ್ಕೆ ಟೆಂಡರ್ ಕರೆಯಬೇಕಾಗಿದ್ದು, ಇದಕ್ಕೆ ಅಗತ್ಯವಿರುವ ಜಾಗದ ವಿಚಾರವಾಗಿ ನಾವು ಸಭೆ ಮಾಡಿದ್ದೇವೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ನೀಟ್ ಪರೀಕ್ಷಾ ಕೇಂದ್ರದಲ್ಲಿ ಜನಿವಾರ ತೆಗೆಸಿರುವುದು ಖಂಡನೀಯ. ಯಾವುದೇ ಧಾರ್ಮಿಕ ಆಚರಣೆಗೆ ಅಡ್ಡಿ ಮಾಡಬಾರದು. ಧಾರ್ಮಿಕ ಆಚರಣೆ, ವಿಚಾರಗಳಿಗೆ ಸರಕಾರ, ಅಧಿಕಾರಿಗಳು ಅಡ್ಡಿ ಮಾಡಬಾರದು. ಕೇಂದ್ರ ಸರಕಾರದ ಈ ಕ್ರಮ ಸರಿಯಲ್ಲ.

- **ಡಿ.ಕೆ.ಶಿವಕುಮಾರ್** ಉಪಮುಖ್ಯಮಂತ್ರಿ

ಪೂರ್ವ ಮುಂಗಾರಿನಿಂದ ಬೆಸ್ಕಾಂಗೆ 2.99 ಕೋಟಿ ನಷ್ಟ

ಬೆಂಗಳೂರು: ಈ ಬಾರಿಯ ಪೂರ್ವ ಮುಂಗಾರು ಮಳೆಯ ಅಬ್ಬರಕ್ಕೆ ಬೆಸ್ಕಾಂಗೆ ಭಾರಿ ನಷ್ಟವಾಗಿದ್ದು, ಏಪ್ರಿಲ್ ಒಂದೇ ತಿಂಗಳಿಗೆ 2.99 ಕೋಟಿ ರು. ನಷ್ಟವಾಗಿದೆ. ಮಾರ್ಚ್ ತಿಂಗಳಿನಿಂದ ಪೂರ್ವ ಮುಂಗಾರು ಆರಂಭವಾಗಿದ್ದು, ನಡುವೆ ವಾಯು ಭಾರ ಕುಸಿತ ವಾಗಿ ಮಳೆಗಿಂತ ಹೆಚ್ಚು ಬಿರುಸಿನ ಗಾಳಿ ಬೀಸುವಿಕೆ ಕಂಡು ಬಂದಿದೆ. ಈ ಬಿರುಗಾಳಿಯಿಂದಾಗಿ ನೂರಾರು ವಿದ್ಯುತ್ ಕಂಬಗಳು ಧರಾಶಾಹಿಯಾಗಿದ್ದು, ವಿದ್ಯುತ್ ಪರಿವರ್ತಕಗಳಿಗೆ ಹಾಗೂ 4.41ಕಿ. ಮೀನಷ್ಟು ಉದ್ದದ ತಂತಿಗಳಿಗೆ ಹಾನಿಯಾಗಿದೆ. ಇದರಿಂದ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು, ಕೆಲವು ಕಡೆ ವಿದ್ಯುತ್ ಅವಘಡಗಳು ಸಂಭವಿಸಿವೆ. ಮಳೆ ಗಾಳಿಯಿಂದಾಗಿ ಬೆಸ್ಕಾಂ ವ್ಯಾಪ್ತಿಯ ಎಂಟು ಜಿಲ್ಲೆಗಳಲ್ಲಿ 1,880 ವಿದ್ಯುತ್ ಕಂಬಗಳು ಧರೆಗುರುಳಿವೆ. ತುಮಕೂರು ಜಿಲ್ಲೆಯಲ್ಲಿ 650 ಕಂಬಗಳಿಗೆ ಹಾನಿಯಗಿದ್ದು, ಇದು ಎಂಟು ಜಿಲ್ಲೆಗಳ ಪೈಕಿ ಅತಿ ಹೆಚ್ಚು ಹಾನಿ ಸಂಭವಿಸಿದ ಜಿಲ್ಲೆಯಾಗಿದೆ ಜಿಲೆಯ ತುಮಕೂರು ಗುಬಿ ಮತ್ತು ತುರುವೇಕರೆ ತಾಲೂಕುಗಳಲ್ಲಿ ಹೆಚ್ಚು ಹಾನಿಯಾಗಿದೆ ಎಂದು ಮೂಲಗಳು ತಿಳಿಸಿವೆ.

ದಾವಣಗೆರೆ ಜಿಲ್ಲೆಯಲ್ಲಿ ಮಳೆಗಿಂತ ಹೆಚ್ಚು ಗಾಳಿ ಬೀಸಿದೆ. ಇದರಿಂದ 542 ಕಂಬಗಳಿಗೆ ಹಾನಿಯಾಗಿದೆ. ರಾಮನಗರದಲ್ಲಿ ಗಾಳಿ, ಮಳೆ ಎರಡೂ ಸೇರಿಕೊಂಡು, 256 ಕಂಬಗಳಿಗೆ ಹಾನಿ ಮಾಡಿದೆ. ಬೆಂಗಳೂರು ನಗರ ಜಿಲ್ಲೆ, ದಾವಣಗೆರೆ ಮತ್ತು ರಾಮನಗರ ಜಿಲ್ಲೆಗಳಲ್ಲಿ ₹50 ಲಕ್ಷಕ್ಕೂ ಹೆಚ್ಚು ಹಾನಿಯಾಗಿದೆ. ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗ್ಗಳಲ್ಲಿ ಹಾನಿ ಪ್ರಮಾಣ ಕಡಿಮೆ ಎಂದು ಬೆಸ್ಕಾಂ ಮಾಹಿತಿ ನೀಡಿದೆ.

ಬೆಂಗಳೂರು ನಗರ ಜಿಲ್ಲೆಯೊಂದರಲ್ಲೇ 51 ವಿದ್ಯುತ್ ಪರಿವರ್ತಕಗಳು ಸುಟ್ಟು ಹೋಗಿವೆ. ಇದರೊಂದಿಗೆ 8 ಜಿಲ್ಲೆಗಳಲ್ಲಿ 1.50 ಕೋಟಿ ವೆಚ್ಚದ 150ಕ್ಕೂ ಹೆಚ್ಚು ವಿದ್ಯುತ್ ಪರಿವರ್ತಕಗಳು ಹಾನಿಗೊಳಗಾಗಿವೆ. 84 ಡಿಪಿ ಸ್ಟ್ರಕ್ಚರ್‌ಗಳು ಹಾಳಾಗಿವೆ. ಪರಿಕರಗಳ ಬದಲಾವಣೆಗಾಗಿ 2.54 ಕೋಟಿ ರು ಹಾಗೂ ದುರಸ್ತಿಗಾಗಿ (ಕಾರ್ಮಿಕರ ವೆಚ್ಚ) 44 ಲಕ್ಷ ರು.ನಷ್ಟು ವೆಚ್ಚ ಮಾಡಲಾಗಿದೆ. ಬೆಸ್ಕಾಂ ವ್ಯಾಪ್ತಿಯಲ್ಲಿ ಹಾನಿಗೊಳಗಾದ ವಿದ್ಯುತ್ ಕಂಬಗಳು ಹಾಗೂ ವಿದ್ಯುತ್ ಪರಿವರ್ತಕಗಳನ್ನು ಆಗಾಗ್ಗೆ ಬದಲಿಸಲಾಗಿದೆ. ದುರಸ್ತಿ ಕಾರ್ಯ ಬಹುತೇಕ ಪೂರ್ಣಗೊಂಡಿದೆ ಎಂದು ಬೆಸ್ಕಾಂ ಮೂಲಗಳು ತಿಳಿಸಿವೆ.

ಮುಸ್ಲಿಮರೊಂದಿಗೆ ಪ್ರತ್ಯೇಕ ಸಭೆ ನಡೆಸಿಲ್ಲ

ಬೆಂಗಳೂರು: ಪೊಲೀಸ್ ಅಧಿಕಾರಿಗಳ ಉಪಸ್ಥಿತಿಯಲ್ಲಿ ಯಾವುದೇ ಮುಸ್ಲಿಂ ಮುಖಂಡರೊಂದಿಗೆ ಸಭೆ ನಡೆಸಿಲ್ಲ. ಅಲ್ಲದೇ ಪ್ರತ್ಯೇಕವಾಗಿ ಮುಸ್ಲಿಂ ಸಮುದಾಯದ ಸಭೆ ನಡೆಸಿಲ್ಲ ಎಂದು ಮಂಗಳೂರು ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟಪಡಿಸಿದ್ದಾರೆ.

ಸುಹಾಸ್ ಶೆಟ್ಟಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಎರಡು ದಿನಗಳ ಹಿಂದೆ ಮಂಗಳೂರಿಗೆ ಗೃಹ ಸಚಿವರು ಭೇಟಿ ನೀಡಿದ್ದ ಸಮಯದಲ್ಲಿ, ಮುಸ್ಲಿಂ ನಾಯಕರೊಂದಿಗೆ ಪ್ರತ್ಯೇಕ ಸಭೆ ಹಾಗೂ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದ್ದಾರೆ ಎನ್ನುವ ಆರೋಪ ಕೇಳಿ ಬಂದಿತ್ತು.

ಆದರೆ ಈ ಆರೋಪವನ್ನು ತಳ್ಳಿಹಾಕಿರುವ ದಿನೇಶ್ ಗುಂಡೂರಾವ್, ಈ ರೀತಿಯ ಯಾವುದೇ ಘಟನೆ ನಡೆದಿಲ್ಲ ಎಂದಿದ್ದಾರೆ. ಈ ಸಂಬಂಧ ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಗೃಹ ಸಚಿವರಾಗಲಿ, ನಾನಾಗಲಿ ಪೊಲೀಸ್ ಅಧಿಕಾರಿಗಳ ಉಪಸ್ಥಿತಿಯಲ್ಲಿ ಯಾವುದೇ ಮುಸ್ಲಿಂ ಮುಖಂಡರೊಂದಿಗೆ ಸಭೆ ನಡೆಸಿಲ್ಲ ಎಂದು ತಿಳಿಸಿದ್ದಾರೆ.

ರಾಜೀವ್ ಗಾಂಧಿ ವಿಶ್ವವಿದ್ಯಾನಿಲಯ 27ನೇ ವಾರ್ಷಿಕ ಘಟಿಕೋತ್ಸವ ಇಂದು

93 ವಿದ್ಯಾರ್ಥಿಗಳಿಗೆ 109 ಚಿನ್ನದ ಪದಕ ಪ್ರದಾನ
ಮೂವರು ಸಾಧಕರಿಗೆ ಡಾಕ್ಟರ್ ಆಫ್ ಸೈನ್ಸ್ ಪ್ರದಾನ

ಬೆಂಗಳೂರು: ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದ 27 ನೇ ವಾರ್ಷಿಕ ಘಟಿಕೋತ್ಸವ ಮಂಗಳವಾರ ನಿಮ್ಹಾನ್ಸ್ ಸಭಾಂಗಣದಲ್ಲಿ ನಡೆಯಲಿದ್ದು, ವಿಜ್ಞಾನ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮೂವರು ಗಣ್ಯರಿಗೆ ಡಾಕ್ಟರ್ ಆಫ್ ಸೈನ್ಸ್ ಪ್ರದಾನ ಮಾಡಲಾಗುತ್ತದೆ.

ಸುದ್ದಿಗೋಷ್ಠಿಯಲ್ಲಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಬಿ.ಸಿ. ಭಗವಾನ್ ಅವರು ಮಾತನಾಡಿ, ಘಟಿಕೋತ್ಸವದಲ್ಲಿ ಡಾ.ಹೊಂಬೇಗೌಡ ಶರತ್‌ಚಂದ್ರ, ಡಾ.ಗಿರೀಶ್ ರಾವ್ ಹಾಗೂ ಡಾ.ಜಿ.ಟಿ.ಸುಭಾಸ್ ಅವರಿಗೆ ಡಾಕ್ಟರ್ ಆಫ್ ಸೈನ್ಸ್ ಪ್ರದಾನ ಮಾಡಲಾಗುತ್ತದೆ ಎಂದರು. ಘಟಿಕೋತ್ಸವದ ಅಧ್ಯಕ್ಷತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಥ್ ವಹಿಸಲಿದ್ದು, ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಆರ್.ಪಾಟೀಲ್, ಅಜೀಂ ಪ್ರೇಮ್‌ಜಿ ಫೌಂಡೇಶನ್ ಅಧ್ಯಕ್ಷ ಉದ್ಯಮಿ ಅಜೀಂ ಪ್ರೇಮ್ ಜಿ ಸೇರಿದಂತೆ ಹಲವು ಗಣ್ಯರು ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

ಚಿನ್ನದ ಪದಕ: ಬೆಂಗಳೂರಿನ ಪಿಇಎಸ್ ಫಾರ್ಮಸಿ ಕಾಲೇಜಿನ ಡಾ.ಗಿರೀಶ್ ಬಿ.ಎಸ್.ಅವರಿಗೆ 6 ಚಿನ್ನದ ಪದಕಗಳು, ಉಜಿರೆಯ ಡಿ.ಎಂ.ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನ ಕಾಲೇಜಿನ ಡಾ. ಗನ್ಯಾಶ್ರೀ ಅವರಿಗೆ 4 ಚಿನ್ನದ ಪದಕಗಳು, ಶಿವಮೊಗ್ಗದ ಶರಾವತಿ ದಂತ ಕಾಲೇಜಿನ ಡಾ. ಪ್ರಕೃತಿ ಸಿ ಪಟೇಲ್ ಅವರಿಗೆ 3 ಚಿನ್ನದ ಪದಕಗಳು ಹಾಗೂ 4 ನಗದು ಬಹುಮಾನ ನೀಡಿ ಗೌರವಿಸಲಾಗುತ್ತದೆ ಎಂದು ಅವರು ತಿಳಿಸಿದರು.

ಅಲೀನ ಜೋಸ್ ಅವರಿಗೆ 3 ಚಿನ್ನದ ಪದಕಗಳು, ಡಾ.ನಮಿತಾ ಅವರಿಗೆ 2 ಚಿನ್ನದ ಪದಕಗಳು ಮತ್ತು 2 ನಗದು ಬಹುಮಾನಗಳು, ಹರ್ಷಿತಾ ಎಂ., ಅಶ್ಮಿತಾ ಶ್ರೇಷ್ಠ, ರಾಚೆಲ್ ಮೋರೆನ್ ಅವರಿಗೆ ತಲಾ 2 ಚಿನ್ನದ ಪದಕ ನೀಡಲಾಗುವುದು. ಒಟ್ಟು 93 ವಿದ್ಯಾರ್ಥಿಗಳು 109 ಚಿನ್ನದ ಪದಕಗಳನ್ನು ಪಡೆದಿದ್ದಾರೆ. ಚಿನ್ನದ ಪದಕವು 22 ಕ್ಯಾರೆಟ್ ಬಂಗಾರವುಳ್ಳ 5 ಗ್ರಾಂ ತೂಕ ಒಳಗೊಂಡಿರುತ್ತದೆ. ಒಟ್ಟು 63,982 ಅಭ್ಯರ್ಥಿಗಳು ಪದವಿ ಪಡೆಯಲು ಅರ್ಹರಾಗಿದ್ದಾರೆ. ಈ ಪೈಕಿ 82 ಪಿಎಚ್ ಡಿ.265 ಸೂಪರ್ ಸ್ಪೆಶಾಲಿಟಿ, 8,588 ಸ್ನಾತಕೋತ್ತರ ಪದವಿ, 6 ಸ್ನಾತಕೋತ್ತರ ಡಿಪ್ಲೊಮಾ ಪದವಿ, 515 ಫೆಲೋಷಿಪ್ ಕೋರ್ಸ್, 9 ಸರ್ಟಿಫಿಕೇಟ್ ಕೋರ್ಸ್, 54,517 ಸ್ನಾತಕ ಅಭ್ಯರ್ಥಿಗಳಿಗೆ ಪದವಿ ಪ್ರದಾನ ಮಾಡಲಾಗುವುದು. ವಿವಿಯ ಒಟ್ಟಾರೆ ಫಲಿತಾಂಶ ಶೇ.87.49 ರಷ್ಟಾಗಿದೆ ಎಂದರು.

ರಾಮನಗರದಲ್ಲಿ ರಾಜೀವ್ ಗಾಂಧಿ ವಿವಿ: ಶೇ.30ರಷ್ಟು ಕಾಮಗಾರಿ ಪೂರ್ಣ

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯವನ್ನು 2007ರ ಗೆಜೆಟ್‌ನ ಪ್ರಕಾರ ರಾಮನಗರದಲ್ಲಿ ಸ್ಥಾಪಿಸಲಾಗುತ್ತಿದೆ. ಸಾಕಷ್ಟು ಅಡೆತಡೆಗಳ ಬಳಿಕ ಮತ್ತೆ ಈಗ ಕಾಮಗಾರಿ ಆರಂಭವಾಗಿದ್ದು, ಶೇ.30ರಷ್ಟು ಕಾಮಗಾರಿ ಪೂರ್ಣಗೊಂಡಿದೆ. ರಾಮನಗರದ ಅರ್ಚಕರ ಹಳ್ಳಿಯಲ್ಲಿ 215 ಎಕರೆ ಪ್ರದೇಶದಲ್ಲಿ ವಿವಿಯ ಕಾಮಗಾರಿ ನಡೆಯುತ್ತಿದೆ. 2026ರ ಮಾರ್ಚ್ 26ರ ವೇಳೆಗೆ ಮೆಡಿಕಲ್ ಕಾಲೇಜು ಹಾಗೂ ಆಡಳಿತ ಮಂಡಳಿ ಕಟ್ಟಡದ ಕಾಮಗಾರಿ ಪೂರ್ಣಗೊಳ್ಳುತ್ತದೆ ಎಂಬ ಮಾಹಿತಿ ನೀಡಲಾಗಿದೆ. 600 ಕೋಟಿ ರು. ಅನುದಾನದಲ್ಲಿ ಈಗಾಗಲೇ 300 ಕೋಟಿ ರು. ನೀಡಲಾಗಿದೆ. ಕಾಮಗಾರಿ ಶೀಘ್ರ ಮುಗಿಸುವಂತೆ ಮನವಿ ಮಾಡಲಾಗಿದೆ. ಕಾಮಗಾರಿ ಪೂರ್ಣಗೊಂಡ ಬಳಿಕ ರಾಜೀವ್ ಗಾಂಧಿ ವಿಶ್ವವಿದ್ಯಾನಿಲಯವನ್ನು ರಾಮನಗರಕ್ಕೆ ಸ್ಥಳಾಂತರ ಮಾಡಲಾಗುತ್ತದೆ ಎಂದು ಕುಲಪತಿ ಡಾ.ಬಿ.ಸಿ.ಭಗವಾನ್ ತಿಳಿಸಿದ್ದಾರೆ.

ಅಂಕ ಮಿತಿ ಶೇ.33ಕ್ಕೆ ಇಳಿಸಲು ಆಗ್ರಹ

ಬೆಂಗಳೂರು: ಎಸ್‌ಎಸ್‌ಎಲ್‌ಸಿ ಪರೀಕ್ಷೆ ಸುಧಾರಣೆಯಾಗುವ ನಿಟ್ಟಿನಲ್ಲಿ ಕನಿಷ್ಠ ಅಂಕಗಳನ್ನು ಶೇ.35 ರಿಂದ ಶೇ.33ಕ್ಕೆ ಇಳಿಸಬೇಕು ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಶಾಲಾ ಸಂಘ ಸರಕಾರವನ್ನು ಆಗ್ರಹಿಸಿದೆ.

ಈ ಕುರಿತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಪ್ರಧಾನ ಕಾರ್ಯದರ್ಶಿ ರಶ್ಮಿ ಮಹೇಶ್ ರಿಗೆ ಮನವಿ ಸಲ್ಲಿಸಿದ್ದು, ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶ, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶ ಪುದುಚೇರಿಯಲ್ಲಿನ ಶಿಕ್ಷಣ ವ್ಯವಸ್ಥೆಯೊಂದಿಗೆ ಹೋಲಿಕೆ ಮಾಡಿ ಅಧ್ಯಯನ ನಡೆಸಿ ಸುಧಾರಣಾ ಕ್ರಮಗಳ ಸಲಹೆಯನ್ನು ಮುಂದಿಟ್ಟಿದೆ. ಸರಕಾರ ಕೂಡಲೇ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಸುಧಾರಣೆಗಳನ್ನು ಜಾರಿಗೊಳಿಸಲು ಸಮಿತಿಯನ್ನು ರಚಿಸಬೇಕು ಎಂದು ಹೇಳಿದೆ.

ಕರ್ನಾಟಕದಲ್ಲಿ ರಾಜ್ಯಮಟ್ಟದ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಪಾಸಾಗಲು ಶೇ.35 ಮತ್ತು ಸಿಬಿಎಸ್‌ಸಿ ಪರೀಕ್ಷೆಗೆ ಶೇ.33 ರಷ್ಟು ಅಂಕಗಳನ್ನು ಗಳಿಸಬೇಕಿದೆ. ಕೇರಳದಲ್ಲಿ ಎಲ್ಲ ವಿಷಯಗಳಲ್ಲೂ ಶೇ.30 ರಷ್ಟು ಅಂಕಗಳ ಮಿತಿಯನ್ನು ನಿಗದಿಪಡಿಸಲಾಗಿದೆ. ಆಂಧ್ರಪ್ರದೇಶದಲ್ಲಿ ಎಲ್ಲ ವಿಷಯಗಳಲ್ಲಿ ಶೇ.35 ಮತ್ತು ಹಿಂದಿಯಲ್ಲಿ ಶೇ.20 ರಷ್ಟು ಅಂಕಗಳನ್ನು ಗಳಿಸಬೇಕಿದ್ದು, ಅಲ್ಲಿ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಲು ಒಟ್ಟಾರೆ ಶೇ.32.5 ರಷ್ಟು ಅಂಕಗಳನ್ನು ಪಡೆಯಬೇಕಿದೆ. ಆದರೆ, ಕರ್ನಾಟಕದಲ್ಲಿ ವಿದ್ಯಾರ್ಥಿಯು ಮುಖ್ಯ ಪರೀಕ್ಷೆಯಲ್ಲಿ ಶೇ. 35 ರಷ್ಟು ಅಂಕಗಳನ್ನು ಗಳಿಸಬೇಕು. ಆದರೆ ಆಂತರಿಕ ಮೌಲ್ಯಮಾಪನ ಅಂಕಗಳನ್ನು ಸಹ ಒಟ್ಟಾರೆ ಅಂಕಗಳಿಗೆ ಪರಿಗಣಿಸಲಾಗುವುದಿಲ್ಲ ಎಂದು ಹೇಳಿದೆ.

ಗಣಿತ ಮತ್ತು ವಿಜ್ಞಾನ ವಿಷಯಗಳಲ್ಲಿ ದ್ವಿಪರೀಕ್ಷಾ ಆಯ್ಕೆ ಇರಬೇಕು ಎಂದು ಶಿಫಾರಸ್ಸು ಮಾಡಲಾಗಿದ್ದು, ಸಿಬಿಎಸ್‌ಸಿ ಪದ್ಧತಿಯಲ್ಲಿ ಬೇಸಿಕ್ ಅಂಕಗಣಿತ ಮತ್ತು ಸ್ಟ್ಯಾಂಡರ್ಡ್ ಅಂಕಗಣಿತ ಎರಡರಲ್ಲಿ ಒಂದನ್ನು ಆಯ್ಕೆ ಮಾಡಿಕೊಳ್ಳಲು ಅವಕಾಶವಿದೆ. ಇದೇ ಪದ್ಧತಿಯನ್ನು ಕರ್ನಾಟಕದಲ್ಲೂ ಅಳವಡಿಸಿಕೊಂಡರೆ ವಿದ್ಯಾರ್ಥಿಗಳ ಮೇಲಿನ ಹೊರೆ ಕಡಿಮೆಯಾಗಲಿದೆ ಎಂದು ಸಂಘ ಅಭಿಪ್ರಾಯಪಟ್ಟಿದೆ.

ಸಮಾಚಾರ ಸಣ್ಣದಲ್ಲ

ಕುಂಚಿಟಿಗ ಮಠಕ್ಕೆ ಉತ್ತರಾಧಿಕಾರಿ ಆಹ್ವಾನ

ಬೆಂಗಳೂರು: ಶ್ರೀಜಗದ್ಗುರು ಕುಂಚಿಟಿಗ ಮಹಾಸಂಸ್ಥಾನ ಮಠ ಉತ್ತರಾಧಿಕಾರಿ ನೇಮಕಕ್ಕೆ ಮುಂದಾಗಿದ್ದು ದೀಕ್ಷೆ ಸ್ವೀಕಾರಕ್ಕೆ ಆಹ್ವಾನ ನೀಡಿದೆ. ಈ ಕುರಿತ ಪ್ರಕಟಣೆಯಲ್ಲಿ ಹೊಸದುರ್ಗದ ಶ್ರೀಜಗದ್ಗುರು ಕುಂಚಿಟಿಗ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶಾಂತವೀರ ಮಹಾಸ್ವಾಮಿ ಅವರು, ಶ್ರೀಮಠಕ್ಕೆ ಉತ್ತರಾಧಿಕಾರಿ ನೇಮಕ ಮಾಡಲು ಬಯಸಿದ್ದು ಆಸಕ್ತ ಭಕ್ತರು ತಮ್ಮ ಮಕ್ಕಳನ್ನು ಅಥವಾ ತಮಗೆ ಗೊತ್ತಿರುವ ಯುವಕರನ್ನು ಶ್ರೀಮಠಕ್ಕೆ ಕರೆದುಕೊಂಡು ಬಂದಲ್ಲಿ, ದೀಕ್ಷಾ ಶಿಕ್ಷಣ ನೀಡಿ ಶ್ರೀ ಪೀಠಕ್ಕೆ ಉತ್ತರಾಧಿಕಾರಿಯಾಗಿ ನೇಮಿಸಲಾಗುವುದು. ತಕ್ಷಣ ಈ ನಿಟ್ಟಿನಲ್ಲಿ ಸಮಾಜದ ಸಂಘಟನೆಗಳು ಮತ್ತು ಭಕ್ತರು ಈ ಕಾರ್ಯ ಮಾಡಿ. ಒಂದು ವೇಳೆ ನೀವು ಮಾಡದಿದ್ದರೆ ನಾವು ಕೈಗೊಳ್ಳುವ ಎಲ್ಲಾ ತೀರ್ಮಾನಕ್ಕೆ ನಿಮ್ಮ ಸಮ್ಮತಿ ಇದೆ ಎಂಬುದಾಗಿದೆ ಎಂದು ತಿಳಿಸಿದ್ದಾರೆ.

ಅರ್ಜಿ ಆಹ್ವಾನ

ಬೆಂಗಳೂರು: ಸೆಂಟ್ರಲ್ ಕಾಲೇಜು ಕ್ಯಾಂಪಸ್ ಮತ್ತು ಮಲ್ಲೇಶ್ವರದ ಮಹಿಳಾ ಮಹಾವಿದ್ಯಾಲಯ ಕಾಲೇಜಿನಲ್ಲಿ ಲಭ್ಯವಿರುವ ವಿವಿಧ ಪದವಿ ಕೋರ್ಸುಗಳ ಪ್ರವೇಶಕ್ಕೆ ಬಿಸಿಯು ಅರ್ಜಿ ಆಹ್ವಾನಿಸಿದೆ. ಬಿಸಿಎ-ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಮತ್ತು ಮೆಷಿನ್ ಲರ್ನಿಂಗ್, ಡೇಟಾ ಸೈನ್ಸ್, ಬಿಎಸ್‌ಸಿ-ಗಣಕ ವಿಜ್ಞಾನ, ಗಣಿತ ಶಾಸ್ತ್ರ, ಸಂಖ್ಯಾಶಾಸ್ತ್ರ, ಫ್ಯಾಷನ್ ಅಂಡ್ ಅಪ್ಯಾರಲ್ ಡಿಸೈನ್, ಬಿಬಿಎ-ಬಿಜಿನೆಸ್ ಅನಾಲಿಟಿಕ್ಸ್, ಬಿಕಾಂ-ಫೈನಾನ್ಸ್ ಮತ್ತು ಅಕೌಂಟಿಂಗ್, ಫೈನಾನ್ಷಿಯಲ್ ಟೆಕ್ನಾಲಜಿ, ಬಿಎ- ಆಂಗ್ಲ, ಫ್ರೆಂಚ್, ಇತಿಹಾಸ, ಅರ್ಥಶಾಸ್ತ್ರ, ಪತ್ರಿಕೋದ್ಯಮ(ಯಾವುದೇ ಮೂರು ವಿಷಯಗಳು) ಕೋರ್ಸುಗಳು ವಿವಿ ಕ್ಯಾಂಪಸ್‌ನಲ್ಲಿ ಲಭ್ಯವಿದೆ. ಮಹಿಳಾ ಕಾಲೇಜಿನಲ್ಲಿ ಕನ್ನಡ, ಇಂಗ್ಲೀಷ್, ಫ್ರೆಂಚ್, ಜರ್ಮನ್, ಸಂಸ್ಕೃತ ಮತ್ತು ಹಿಂದಿ ಭಾಷಾ ವಿಷಯಗಳು, ಬಿಸಿಎ, ಬಿಬಿಎ, ಬಿಕಾಂ ಸಾಮಾನ್ಯ, ವಿವಿಧ ಬಿಎಸ್‌ಸಿ, ಬಿಎ ಕೋರ್ಸುಗಳು ಪ್ರವೇಶಕ್ಕೆ ಲಭ್ಯವಿದೆ. ಆಸಕ್ತ ವಿದ್ಯಾರ್ಥಿಗಳು ವಿವಿಯ ವೆಬ್‌ಸೈಟ್ www.bcu.ac.in ಮೂಲಕ ಅಥವಾ ನೇರವಾಗಿ ಉನ್ನತ ಶಿಕ್ಷಣ ಇಲಾಖೆಯ https://uucms.karnataka.gov.in ಮೂಲಕ ನೋಂದಣಿ ಮಾಡಿ ಅರ್ಜಿ ಸಲ್ಲಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

ಚಾಲಕ ಕಂ ನಿರ್ವಾಹಕ ಪರೀಕ್ಷೆಗೆ ದಿನಾಂಕ ನಿಗದಿ

ಬೆಂಗಳೂರು: ಕೆಎಸ್‌ಆರ್‌ಟಿಸಿ ಚಾಲಕ ಕಂ ನಿರ್ವಾಹಕರ ಹುದ್ದೆಗೆ ಅರ್ಜಿ ಸಲ್ಲಿಸಿದ್ದ ಅಭ್ಯರ್ಥಿಗಳಿಗೆ ಕೆಲ ತರಬೇತಿ ಕೇಂದ್ರಗಳಲ್ಲಿ ಚಾಲನಾ ವೃತ್ತಿ ಪರೀಕ್ಷೆ ನಡೆಸಲಾಗಿದ್ದು, ಹಾಸನ ತರಬೇತಿ ಕೇಂದ್ರದಲ್ಲಿ ಚಾಲನಾ ವೃತ್ತಿ ಪರೀಕ್ಷೆಗೆ ಆಯ್ಕೆ ಮಾಡಿಕೊಂಡವರಿಗೆ ತರಬೇತಿ ಪರೀಕ್ಷೆಗೆ ದಿನಾಂಕ ನಿಗದಿ ಪಡಿಸಿದೆ. ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿದ್ದು, ಚಾಲಕ-ಕಂ-ನಿರ್ವಾಹಕ ಹುದ್ದೆಗೆ ಅರ್ಜಿ ಸಲ್ಲಿಸಿ ಹಾಸನ ತರಬೇತಿ ಕೇಂದ್ರದಲ್ಲಿ ಚಾಲನಾ ವೃತ್ತಿ ಪರೀಕ್ಷೆ ಪಡೆಯಲು ಆಯ್ಕೆ ಮಾಡಿಕೊಂಡಿದ್ದ ಅಭ್ಯರ್ಥಿಗಳಿಗೆ ಚಾಲನಾ ವೃತ್ತಿ ಪರೀಕ್ಷೆಯನ್ನು 16-12-2024 ರಿಂದ ನಡೆಸಲಾಗುತ್ತಿದೆ. ಈ ಸಂಬಂಧ ಎಲ್ಲಾ ಅಭ್ಯರ್ಥಿಗಳಿಗೆ ಕರಪತ್ರ ಡೌನ್‌ಲೋಡ್ ಮಾಡಿಕೊಂಡು ನಿಗದಿತ ದಿನಾಂಕದಂದು ಹಾಜರಾಗಲು ಪತ್ರಿಕಾ ಪ್ರಕಟಣೆ ಹಾಗೂ ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ಪ್ರಕಟಣೆ ನೀಡುವ ಮೂಲಕ ಮಾಹಿತಿ ನೀಡಲಾಗಿತ್ತು ಎಂದಿದೆ. ಕೆಲವೊಂದು ಅಭ್ಯರ್ಥಿಗಳು ಗೈರುಹಾಜರಾಗಿರುವುದರಿಂದ ಅವರಿಗೆ ಮತ್ತೊಂದು ಅವಕಾಶ ನೀಡಲು ನಿರ್ಧರಿಸಿ ಮೇ.8 ರಿಂದ ಮೇ.20 ರವರೆಗೆ ಚಾಲನಾ ವೃತ್ತಿ ಪರೀಕ್ಷೆಯನ್ನು ಮರು ನಿಗದಿಗೊಳಿಸಲಾಗಿದೆ. ಗೈರುಹಾಜರಾದ ಅಭ್ಯರ್ಥಿಗಳು ಮತ್ತೊಮ್ಮೆ ನಿಗಮದ ಅಧಿಕೃತ ವೆಬ್‌ಸೈಟ್‌ನಲ್ಲಿ ksrtcjobs.karnataka.gov.inರಲ್ಲಿ ಕರಪತ್ರವನ್ನು ಡೌನ್-ಲೋಡ್ ಮಾಡಿಕೊಂಡು ಕರಪತ್ರದಲ್ಲಿ ತಿಳಿಸಿರುವ ಅಗತ್ಯ ದಾಖಲಾತಿಗಳೊಂದಿಗೆ ನಿಗದಿತ ದಿನಾಂಕ ಹಾಗೂ ಸಮಯಕ್ಕೆ ಹಾಜರಾಗಬೇಕು ಎಂದಿದೆ.

ಬೌದ್ಧ ಧರ್ಮದ ಪ್ರತ್ಯೇಕ ಕಾಲಂಗೆ ಆಗ್ರಹ

ಬೆಂಗಳೂರು: ರಾಜ್ಯ ಸರಕಾರ ಒಳಮೀಸಲು ಸಮೀಕ್ಷೆ ದತ್ತಾಂಶದಲ್ಲಿ ಬೌದ್ಧ ಧರ್ಮದ ಕಾಲಂ ಸೃಷ್ಟಿಸಿಲ್ಲ ಹಾಗೂ ಜಾತಿ ರಹಿತ ಬೌದ್ಧರೆಂದು ಸೇರಿಸಲು ಯಾವುದೇ ದತ್ತಾಂಶ ಇಲ್ಲ. ಕೂಡಲೇ ಈ ಸಮಸ್ಯೆ ಬಗೆಹರಿಸಬೇಕು ಎಂದು ಭಾರತೀಯ ಬೌದ್ಧ ಮಹಾಸಭಾ ಯುವ ಘಟಕ ರಾಜ್ಯಾಧ್ಯಕ್ಷ ದರ್ಶನ.ಬಿ.ಸೋಮಶೇಖರ್ ಆಗ್ರಹಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅಂಬೇಡ್ಕರ್ ಬುದ್ಧರ ಅನುಯಾಯಿಗಳಾಗಿದ್ದು, ನಾವೆಲ್ಲರೂ ಜಾತಿ ರಹಿತವಾದ ಬೌದ್ಧ ಧರ್ಮ ಅನುಸರಿಸುತ್ತಿದ್ದೇವೆ. ಸಚಿವ ಡಾ.ಎಚ್.ಸಿ.ಮಹದೇವಪ್ಪ ಅವರಿಗೆ ಈಗಾಗಲೇ ಮನವಿ ಮಾಡಿದ್ದರೂ ಸಹ ಬೌದ್ಧ ಧರ್ಮದ ಕಾಲಂ ಹಾಗೂ ಜಾತಿ ರಹಿತ ಬೌದ್ಧರೆಂದು ಸೇರಿಸಲು ದತ್ತಾಂಶದಲ್ಲಿ ಹೊಸ ವಿಭಾಗ ರಚಿಸಿಲ್ಲ. ಈಗಾಗಲೇ ಒಳಮೀಸಲಾತಿಯ ಜನಗಣತಿಯ ಸಮೀಕ್ಷೆಯಲ್ಲಿ ಜಾತಿ ಹೆಸರನ್ನು ಬರೆಸದೇ ಇರುವವರನ್ನು ಬೌದ್ಧರೆಂದು ಪರಿಗಣಿಸಬೇಕು ಎಂದು ಆಗ್ರಹಿಸಿದ್ದಾರೆ.

{ ಬಿ.ವೈ.ವಿಜಯೇಂದ್ರ } ಬಿಜೆಪಿ ರಾಜ್ಯಾಧ್ಯಕ್ಷ

ಕಾಂಗ್ರೆಸ್ ಸರಕಾರ ಮಾತ್ರ ತನ್ನ ನೈತಿಕ ಜವಾಬ್ದಾರಿ ಮರೆತು ವರ್ತಿಸುತ್ತಿದೆ. ಕಾನೂನು ಸುವ್ಯವಸ್ಥೆ ಹತೋಟಿಗೆ ತೆಗೆದುಕೊಳ್ಳಲು ಯಾವುದೇ ಕಾನೂನು ಕ್ರಮಕ್ಕೆ ಮುಂದಾಗುತ್ತಿಲ್ಲ, ಗೃಹ ಇಲಾಖೆ ಸಂಪೂರ್ಣ ನಿಷ್ಕ್ರಿಯವಾಗುವಂತೆ ಕಾಣದ ಪ್ರಭಾವಿ ಕೈಗಳು ಕೆಲಸ ಮಾಡುತ್ತಿರುವುದು ಸುಹಾಸ್ ಕೊಲೆ ಹಾಗೂ ನಂತರದ ಬೆದರಿಕೆಗಳ ಪ್ರಕರಣಗಳಿಂದ ಸ್ಪಷ್ಟವಾಗುತ್ತಿದೆ.



ಆನಂದ ಕೋ ಆಪರೇಟಿವ್ ಬ್ಯಾಂಕ್‌ನ ಎಚ್‌ಬಿಆರ್ ಬಡಾವಣೆಯ ಹೊಸ ಶಾಖೆ ಉದ್ಘಾಟನಾ ಸಮಾರಂಭದಲ್ಲಿ ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಅವರನ್ನು ಸನ್ಮಾನಿಸಲಾಯಿತು. ಬ್ಯಾಂಕಿನ ಅಧ್ಯಕ್ಷ ಸಿ.ದೊಡ್ಡೀರಯ್ಯ, ಉಪಾಧ್ಯಕ್ಷ ಕೆ.ಎಸ್.ರುದ್ರಯ್ಯ, ವೃತ್ತಿಪರ ನಿರ್ದೇಶಕ ಸಿ.ಎಸ್.ಪುಟ್ಟರಾಜು, ಕಾರ್ಯನಿರ್ವಹಣಾಧಿಕಾರಿ ಕೆ.ಜನಾರ್ಧನ್, ನಿರ್ದೇಶಕ ಸಿ.ಎಸ್.ಸಿದ್ದರಾಜು ಉಪಸ್ಥಿತರಿದ್ದರು.

ಕುಡಿಯುವ ನೀರಿನ ಸಮಸ್ಯೆ ಆಗದಂತೆ ಎಚ್ಚರವಹಿಸಿ

ಹಣಕಾಸಿನ ಕೊರತೆ ಇಲ್ಲ, ಎಷ್ಟು ಬೇಕಾದರೂ ಹಣ ಕೊಡುತ್ತೇವೆ: ಸಿಎಂ ಸಿದ್ದರಾಮಯ್ಯ

ಬೆಂಗಳೂರು: ಶುದ್ಧ ಕುಡಿಯುವ ನೀರಿಗೆ ರಾಜ್ಯದ ಒಂದೇ ಒಂದು ಗ್ರಾಮದಲ್ಲೂ ಸಮಸ್ಯೆ ಆಗಬಾರದು ಎಂದು ಜಿಲ್ಲಾಧಿಕಾರಿಗಳಿಗೆ-ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಪಷ್ಟ ಸೂಚನೆ ನೀಡಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕುರಿತು ಜಿಲ್ಲಾಧಿಕಾರಿಗಳೊಂದಿಗೆ ನಡೆಸಿದ ವಿಡಿಯೊ ಸಂವಾದದಲ್ಲಿ ಮಾತನಾಡಿ, ರಾಜ್ಯದಲ್ಲಿ ಎಲ್ಲಿಯೂ ಕುಡಿಯುವ ನೀರಿಗೆ ಯಾವುದೇ ಕಾರಣಕ್ಕೂ ತೊಂದರೆಯಾಗಬಾರದು. ಕುಡಿಯುವ ನೀರಿನ ನಿರ್ವಹಣೆಗೆ ಯಾವುದೇ ಹಣಕಾಸಿನ ಕೊರತೆ ಇರುವುದಿಲ್ಲ. ಪಂಚಾಯತ್ ರಾಜ್ ಇಲಾಖೆಗೆ 60 ಕೋಟಿ ರು. ಈಗಾಗಲೇ ಬಿಡುಗಡೆ ಮಾಡಲಾಗಿದೆ.

